# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2023-24ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-180 ರಲ್ಲಿ ಘೋಷಿಸಿರುವಂತೆ ರಾಜ್ಯದ 11 ಕಾರ್ಪೋರೇಷನ್‌ಗಳ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತರ ಸ್ಲಂ/ ಕಾಲೋನಿ ಅಭಿವೃದ್ಧಿ ಯೋಜನೆಯ ಅಡಿಯಲ್ಲಿ ವಿವಿಧ ಕಾರ್ಯಕ್ರಮಗಳನ್ನು ಕೈಗೊಳ್ಳಲು ಸರ್ಕಾರದ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: MWD 169 MDS 2020 ದಿ:16.12.2020.
2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯಇವರ ಏಕಕಡತ ಸಂಖ್ಯೆ:ಅಸಂನಿ/ ಮಾ.ಮು.ವಿ.ಅ.ಯೋ/ ಸಿಆರ್-05/ 2023-24.

*~*~*~*~*~*

**ಪ್ರಸ್ತಾವನೆ:-**

2023-24ನೇ ಸಾಲಿನ ಜುಲೈ ಆಯವ್ಯಯ ಭಾಷಣದ ಕಂಡಿಕೆ-180ರಲ್ಲಿ ಈ ಕೆಳಕಂಡಂತೆ ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿರುತ್ತಾರೆ.

**"ಮುಖ್ಯಮಂತ್ರಿಗಳ ವಿಶೇಷ ಅಭಿವೃದ್ಧಿಯೋಜನೆ ಮತ್ತು ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿ ಯೋಜನೆಗಳಡಿ ವಿವಿಧ ಕಾರ್ಯಕ್ರಮಗಳನ್ನು ಕೈಗೊಳ್ಳಲು ಪ್ರಸಕ್ತ ಸಾಲಿನಲ್ಲಿ 360 ಕೋಟಿ ರೂ.ಗಳನ್ನು ಮೀಸಲಿಡಲಾಗುವುದು."**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿನ ಸರ್ಕಾರದ ಆದೇಶದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನೊಳಗೊಂಡಂತೆ ರಾಜ್ಯದಾದ್ಯಂತ ಮಹಾನಗರ ಪಾಲಿಕೆಗಳ ವ್ಯಾಪ್ತಿಗೆ ಬರುವ ಪ್ರತಿ ವಿಧಾನಸಭಾ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಅಧಿಸೂಚಿತವಲ್ಲದ ಕೊಳಗೇರಿ ಪ್ರದೇಶಗಳಲ್ಲಿ ಈ ಕೆಳಕಂಡ ಮೂಲಭೂತ ಸೌಕರ್ಯಗಳನ್ನು ಕೈಗೊಳ್ಳಲು ಮಾರ್ಗಸೂಚಿಗಳೊಂದಿಗೆ ಆದೇಶ ಹೊರಡಿಸಲಾಗಿದೆ.

1. ರಸ್ತೆ ಮತ್ತು ಚರಂಡಿ/ ಒಳಚರಂಡಿ ನಿರ್ಮಾಣ.
2. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು.
3. ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು.
4. ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆಗೆ ಸ್ಥಳೀಯ ಸಂಸ್ಥೆಯ ಸುಪರ್ದಿಗೆ ನೀಡುವುದು)

2023-24ನೇ ಸಾಲಿನ ಆಯವ್ಯಯದಲ್ಲಿ ರಾಜ್ಯದ 11 ಕಾರ್ಪೋರೇಷನ್‌ಗಳಲ್ಲಿ ಅಲ್ಪಸಂಖ್ಯಾತರ ಸ್ಲಂ/ಕಾಲೋನಿ ಅಭಿವೃದ್ಧಿ ಯೋಜನೆಯಡಿ ಅಲ್ಪಸಂಖ್ಯಾತರ ಕಾಲೋನಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಲೆಕ್ಕಶೀರ್ಷಿಕೆ 4225-04-102-0-01(386)ರಡಿ ರೂ.200.00ಕೋಟಿಗಳ ಅನುದಾನವನ್ನು ಒದಗಿಸಲಾಗಿದೆ.

ಸದರಿ ಯೋಜನೆಯನ್ನು 11 ಮಹಾನಗರ ಪಾಲಿಕೆಗಳ ವ್ಯಾಪ್ತಿಯಿಂದ ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರದ ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆ ವ್ಯಾಪ್ತಿಯವರೆಗೂ ವಿಸ್ತರಿಸುವುದರಿಂದ ರಾಜ್ಯಾದ್ಯಂತ ಅಲ್ಪಸಂಖ್ಯಾತರ ಸಮುದಾಯಗಳು ವಾಸಿಸುವ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಿದಂತಾಗುತ್ತದೆ. ಇದರಿಂದ ರಾಜ್ಯದ ಎಲ್ಲಾ ಅಲ್ಪಸಂಖ್ಯಾತರ ಸಮುದಾಯಕ್ಕೆ ಸದರಿ ಯೋಜನೆಯ ಪ್ರಯೋಜನ ದೊರಕಿದಂತಾಗುತ್ತದೆ. ಆದ್ದರಿಂದ, ಈ ಯೋಜನೆಯನ್ನು 11 ಮಹಾನಗರ ಪಾಲಿಕೆಗಳ ವ್ಯಾಪ್ತಿಯನ್ನೊಳಗೊಂಡಂತೆ ಎಲ್ಲಾ 224 ವಿಧಾನಸಭಾ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆಗಳಿಗೂ ಮಾರ್ಗಸೂಚಿಗಳೊಂದಿಗೆ ಸೂಕ್ತ ಆದೇಶ ಹೊರಡಿಸುವಂತೆ ಕೋರಿ ಮೇಲೆ ಓದಲಾದ ಕ್ರ.ಸಂ(3)ರಲ್ಲಿನ ಏಕಕಡತದಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: MWD 352 MDS 2023 (1) ಬೆಂಗಳೂರು</u>**
**<u>ದಿನಾಂಕ: 04.11.2023</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ 11 ಕಾರ್ಪೋರೇಷನ್‌ಗಳಲ್ಲಿ ಅಲ್ಪಸಂಖ್ಯಾತರ ಸ್ಲಂ/ ಕಾಲೋನಿ ಅಭಿವೃದ್ಧಿ ಯೋಜನೆಯನ್ನು ರಾಜ್ಯದ 11 ಮಹಾನಗರ ಪಾಲಿಕೆಗಳನ್ನೊಳಗೊಂಡಂತೆ ಎಲ್ಲಾ 224 ವಿಧಾನಸಭಾ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆಗಳಲ್ಲಿ ಈ ಕೆಳಕಂಡ ಮೂಲಸೌಕರ್ಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಈ ಆದೇಶದ ಅನುಬಂಧದಲ್ಲಿನ ಷರತ್ತಿಗೊಳಪಟ್ಟು ಸರ್ಕಾರದ ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶಿಸಿದೆ.

1. ರಸ್ತೆ ಮತ್ತು ಚರಂಡಿ/ ಒಳಚರಂಡಿ ನಿರ್ಮಾಣ.
2. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ.
3. ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು.
4. ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆಗೆ ಸ್ಥಳೀಯ ಸಂಸ್ಥೆಯ ಸುಪರ್ದಿಗೆ ನೀಡುವುದು)

ಪ್ರಸಕ್ತ ಸಾಲಿನಲ್ಲಿ ರಾಜ್ಯದ 11 ಕಾರ್ಪೋರೇಷನ್‌ಗಳಲ್ಲಿ ಅಲ್ಪಸಂಖ್ಯಾತರ ಸ್ಲಂ/ಕಾಲೋನಿ ಅಭಿವೃದ್ಧಿ ಯೋಜನೆಗೆ ಲೆಕ್ಕಶೀರ್ಷಿಕೆ 4225-04-102-0-01 ರ ಅಡಿಯಲ್ಲಿ ಒದಗಿಸಿರುವ ರೂ.200.00 ಕೋಟಿಗಳ ಅನುದಾನದ ಮಿತಿಯಲ್ಲಿಯೇ ಮೇಲ್ಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸತಕ್ಕದ್ದು.

......3

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:FD 764 Exp-3/2023, ದಿ:02.11.2023 ರಲ್ಲಿ ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:PDS 79 IMM 2023, ದಿ:26.09.2023 ರಲ್ಲಿ ನೀಡಲಾದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ
ಆದೇಶಾನುಸಾರ ಮತ್ತು ಅವರ
ಹೆಸರಿನಲ್ಲಿ

24/11/2023
(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್
ಇಲಾಖೆ

ಇವರಿಗೆ:

1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವಸಂತನಗರ, ಬೆಂಗಳೂರು.
3. ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಹಜ್ ಸಮಿತಿ, ಹಜ್ ಭವನ, ತಿರುಮೇನಹಳ್ಳಿ, ಬೆಂಗಳೂರು.
4. ಎಲ್ಲಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.
5. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

## ಅನುಬಂಧ

**ಸರ್ಕಾರದ ಆದೇಶ ಸಂಖ್ಯೆ: MWD 352 MDS 2023, ದಿನಾಂಕ:04.11.2023.**

**ರಾಜ್ಯದ 11 ಕಾರ್ಪೊರೇಷನ್‌ಗಳ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತರ ಸ್ಲಂ/ ಕಾಲೋನಿ ಅಭಿವೃದ್ಧಿ ಯೋಜನೆಯ ಅಡಿಯಲ್ಲಿ ವಿವಿಧ ಕಾರ್ಯಕ್ರಮಗಳ ಮಾರ್ಗಸೂಚಿಗಳು**

1. ಸ್ಥಳೀಯ ವಿಧಾನಸಭಾ ಸದಸ್ಯರು/ವಿಧಾನ ಪರಿಷತ್ ಸದಸ್ಯರು ಸೂಚಿಸುವ ಕಾಮಗಾರಿಗಳನ್ನು ಪರಿಶೀಲಿಸಿ ಆಯ್ಕೆ ಮಾಡಿಕೊಳ್ಳುವುದು.
2. ಸರ್ಕಾರದ ಆದೇಶ ಹಾಗೂ ಮಾರ್ಗಸೂಚಿಗಳನ್ವಯ ಯೋಜನೆಗಳನ್ನು ಅನುಷ್ಠಾನಗೊಳಿಸುವುದು.
3. ಗ್ರಾಮೀಣ ಪ್ರದೇಶದ ಅಲ್ಪಸಂಖ್ಯಾತರ ಸಮುದಾಯದ ಜನರು ವಾಸವಾಗಿರುವ ಕಾಲೋನಿ, ಮೊಹಲ್ಲ ಮತ್ತು ಇತರೆ ಕೊಳಚೆ ಪ್ರದೇಶಗಳಿಗೆ ಆದ್ಯತೆಯನ್ನು ನೀಡಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳತಕ್ಕದ್ದು.
4. ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರ ಸ್ಥಳೀಯ ಸಂಸ್ಥೆಗಳಿಂದ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಭೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯದವರು ಶೇ 50 ರಷ್ಟು ವಾಸವಾಗಿರುವ ಬಗ್ಗೆ ದೃಢೀಕರಣ ಪಡೆಯುವುದು ಹಾಗೂ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಖಚಿತಪಡಿಸಿಕೊಳ್ಳುವುದು.
5. ಅತೀ ಅವಶ್ಯವಿರುವ/ ಅಭಿವೃದ್ಧಿ ಹೊಂದದ ಕಾಲೋನಿಗಳಿಗೆ ಮೊದಲ ಆದ್ಯತೆ ನೀಡುವುದು.
6. ಕಾಲೋನಿಗಳ ಪ್ರಸ್ತುತ ಸ್ಥಿತಿಗತಿಗಳ ಬಗ್ಗೆ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಅಲ್ಪಸಂಖ್ಯಾತ ಸಮುದಾಯದವರು ಶೇಕಡಾ 50 ರಷ್ಟು ವಾಸವಾಗಿರುವ ಬಗ್ಗೆ ಹಾಗೂ ಕಾಮಗಾರಿ ಪುನರಾವರ್ತಿತವಾಗದಂತೆ (Duplication) ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಕಡ್ಡಾಯವಾಗಿ ಖಾತರಿ ಪಡಿಸಿಕೊಳ್ಳುವುದು.
7. ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಈ ಯೋಜನೆಯ ಕ್ರಿಯಾ ಯೋಜನೆ ತಯಾರಿಸುವಾಗ ಸದರಿ ಯೋಜನೆಯಲ್ಲಿ ಕೈಗೊಳ್ಳುತ್ತಿರುವ ಕಾಮಗಾರಿಯನ್ನು ಸರ್ಕಾರದ ಇತರೆ ಯೋಜನೆಯಲ್ಲಿ ಸೌಲಭ್ಯ ಪಡೆದಿರುವುದಿಲ್ಲವೆಂದು ಹಾಗೂ ಕಾಮಗಾರಿಗಳು ಪುನರಾವರ್ತಿತವಾಗದಂತೆ (Duplication) ಖಾತರಿಪಡಿಸಿಕೊಂಡು ಕ್ರಿಯಾ ಯೋಜನೆಯನ್ನು ತಯಾರಿಸುವುದು.
8. ನಗರಾಭಿವೃದ್ಧಿ ಮತ್ತು ಗ್ರಾಮೀಣ ಅಭಿವೃದ್ಧಿ ಇಲಾಖೆ, ಸ್ಥಳೀಯ ಸಂಸ್ಥೆಗಳು ಕೊಳಗೇರಿ ಅಭಿವೃದ್ಧಿ ಮಂಡಳಿ, ಹೈದ್ರಾಬಾದ್-ಕರ್ನಾಟಕ ಅಭಿವೃದ್ಧಿ ಮಂಡಳಿ ಹಾಗೂ ಇತರೆ ಸರ್ಕಾರಿ ಇಲಾಖೆಗಳ ತೆಗೆದುಕೊಂಡಿರುವ ಕಾಮಗಾರಿಗಳನ್ನು ಪರಿಶೀಲಿಸಿ, ಪುನರಾವರ್ತಿತವಾಗದಂತೆ (Duplication) ದೃಢೀಕರಿಸಿರಬೇಕು.
9. ಅನುಮೋದಿಸಿದ ಕ್ರಿಯಾ ಯೋಜನೆಯನ್ನು ಅಲ್ಪಸಂಖ್ಯಾತರ ನಿರ್ದೇಶನಾಲಯಕ್ಕೆ ಸಲ್ಲಿಸುವುದು.

10. ಕಾಮಗಾರಿಗಳಿಗೆ ಸಂಬಂಧಿಸಿದಂತೆ, ಮೂರನೇ ವ್ಯಕ್ತಿ ತಪಾಸಣಾ ವರದಿ, ಕಾಮಗಾರಿ ಪ್ರಾರಂಭದ/ಪ್ರಗತಿ ಹಾಗೂ ಮುಕ್ತಾಯದ 3 ಹಂತದ ಜಿಪಿಎಸ್ ಛಾಯಾ ಚಿತ್ರಗಳೊಂದಿಗೆ ಕಾಮಗಾರಿ ಮುಕ್ತಾಯದ ವರದಿ ನೀಡಿದ ನಂತರ ಕಾಮಗಾರಿಗೆ ನಿಗಧಿಪಡಿಸಿದ ಒಟ್ಟು ಮೊತ್ತದಲ್ಲಿ ಶೇ 10 ರಷ್ಟು ಅನುದಾನವನ್ನು ಕೊನೆಯ ಕಂತಾಗಿ ಬಿಡುಗಡೆಗೊಳಿಸತಕ್ಕದ್ದು.
11. ಕಾಮಗಾರಿಗಳ ಅನುದಾನ ಬಿಡುಗಡೆಗೆ ಸಂಬಂಧಿಸಿದಂತೆ, ಉಪಯೋಗಿತ ಪ್ರಮಾಣ ಪತ್ರವನ್ನು ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.
12. ಕೈಗೊಳ್ಳಬೇಕಾದ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಶೇಕಡಾ 50 ರಷ್ಟು ಅನುದಾನವನ್ನು ಮೊದಲನೇ ಕಂತಾಗಿ ಬಿಡುಗಡೆ ಮಾಡುವುದು. ನಂತರ ಕಾಮಗಾರಿಯ ಪ್ರಗತಿಯನ್ನಾಧರಿಸಿ ಶೇ.40 ರಷ್ಟನ್ನು ಹಾಗೂ ಮೇಲ್ಕಂಡ ಷರತ್ತು ಸಂಖ್ಯೆ (10)ರಂತೆ ಉಳಿಕೆ ಶೇ. 10% ರಷ್ಟು ಅನುದಾನವನ್ನು ಅಂತಿಮ ಕಂತಾಗಿ ಬಿಡುಗಡೆಗೊಳಿಸತಕ್ಕದ್ದು.
13. ಈ ಕಾಮಗಾರಿಗಳ ಗುಣಮಟ್ಟದ ಬಗ್ಗೆ ಆಯಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಆಗಿಂದಾಗ್ಗೆ ತಪಾಸಣೆ ಕೈಗೊಂಡು ಕಾಮಗಾರಿಯ ಗುಣಮಟ್ಟ ತೃಪ್ತಿಕರವಾಗಿರುವುದನ್ನು ಖಚಿತ ಪಡಿಸಿಕೊಂಡ ನಂತರ ಅನುದಾನ ಬಿಡುಗಡೆ ಮಾಡತಕ್ಕದ್ದು.
14. ಸದರಿ ಯೋಜನೆಯಡಿ ಕೈಗೊಳ್ಳಲಾಗುವ ಕಾಮಗಾರಿಗಳನ್ನು ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಮತ್ತು ಸಂಬಂಧಪಟ್ಟ ಏಜೆನ್ಸಿಯವರೊಂದಿಗೆ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರಿಸುವುದು ಮತ್ತು ಮುಂದಿನ ಸಂಪೂರ್ಣ ನಿರ್ವಹಣೆಗೆ ಜವಾಬ್ದಾರಿಯನ್ನು ಸ್ಥಳೀಯ ಸಂಸ್ಥೆಗಳಿಗೆ ವಹಿಸುವುದು.
15. ಈ ಯೋಜನೆಯಡಿ ಕೈಗೊಳ್ಳುವ ಕಾಮಗಾರಿಗಳು ಹಂಚಿಕೆ ಮಾಡಲಾದ ಅನುದಾನದಲ್ಲಿಯೇ ಪೂರ್ಣಗೊಳಿಸುವಂತಹ ಕಾಮಗಾರಿಗಳನ್ನು ಆಯ್ಕೆ ಮಾಡತಕ್ಕದ್ದು.

4/11/2023

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2023-24ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-180 ರಲ್ಲಿ ಘೋಷಿಸಿರುವಂತೆ ಮುಖ್ಯಮಂತ್ರಿಗಳ ವಿಶೇಷ ಅಭಿವೃದ್ಧಿ ಯೋಜನೆ ಅಡಿಯಲ್ಲಿ ವಿವಿಧ ಕಾರ್ಯಕ್ರಮಗಳನ್ನು ಕೈಗೊಳ್ಳಲು ಸರ್ಕಾರದ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ:**
1. 2023-24ನೇ ಸಾಲಿನ ಜುಲೈ ಆಯವ್ಯಯ ಭಾಷಣದ ಕಂಡಿಕೆ-180.
2. ಸರ್ಕಾರದ ಆದೇಶ ಸಂಖ್ಯೆ: MWD 151 MDS 2016 ದಿ:04.07.2016.
3. ಸರ್ಕಾರದ ಆದೇಶ ಸಂಖ್ಯೆ: MWD 192 MDS 2017 ದಿ:21.07.2017.
4. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಏಕಕಡತ ಸಂಖ್ಯೆ:ಅಸಂನಿ/ ಮಾ.ಮು.ವಿ.ಅ.ಯೋ/ ಸಿಆರ್-05/ 2023-24 ದಿ: 11.09.2023.

*~*~*~*~*

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಸಂಖ್ಯೆ (1)ರಲ್ಲಿನ 2023-24ನೇ ಸಾಲಿನ ಜುಲೈ ಆಯವ್ಯಯ ಭಾಷಣದ ಕಂಡಿಕೆ-180ರಲ್ಲಿ ಈ ಕೆಳಕಂಡಂತೆ ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿರುತ್ತಾರೆ.

**"ಮುಖ್ಯಮಂತ್ರಿಗಳ ವಿಶೇಷ ಅಭಿವೃದ್ಧಿಯೋಜನೆ ಮತ್ತು ರಾಜ್ಯದ 11 ಕಾರ್ಪೊರೇಷನ್‌ಗಳಲ್ಲಿ ಅಲ್ಪಸಂಖ್ಯಾತರ ಸ್ಲಂ/ಕಾಲೋನಿ ಅಭಿವೃದ್ಧಿ ಯೋಜನೆಗಳಡಿ ವಿವಿಧ ಕಾರ್ಯಕ್ರಮಗಳನ್ನು ಕೈಗೊಳ್ಳಲು ಪ್ರಸಕ್ತ ಸಾಲಿನಲ್ಲಿ 360 ಕೋಟಿ ರೂ.ಗಳನ್ನು ಮೀಸಲಿಡಲಾಗುವುದು."**

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿನ ಸರ್ಕಾರದ ಆದೇಶ ದಿ:04.07.2016ರಲ್ಲಿ ಅಲ್ಪಸಂಖ್ಯಾತರು ರಾಜ್ಯದ ಎಲ್ಲಾ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ, ನಗರ ವ್ಯಾಪ್ತಿಯಲ್ಲಿನ Notified Non Notified ಕೊಳಚೆ ಪ್ರದೇಶದಲ್ಲಿ ವಾಸಿಸುತ್ತಿದ್ದು, ಪ್ರಮುಖ ಮೂಲ ಸೌಕರ್ಯಗಳಿಂದ ವಂಚಿತರಾಗಿರುವ ಸ್ಥಳಗಳಲ್ಲಿ ವಿಶೇಷ ಯೋಜನೆಯಡಿ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡು ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿನ ಸರ್ಕಾರದ ಆದೇಶ ದಿ:21.07.2017ರಲ್ಲಿ 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-222ರಲ್ಲಿ ಘೋಷಿಸಿರುವಂತೆ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು (ಕಾಲೋನಿ ಅಭಿವೃದ್ಧಿ) ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶ ಹೊರಡಿಸಲಾಗಿದೆ.

1. ರಸ್ತೆ ಮತ್ತು ಚರಂಡಿ/ ಒಳಚರಂಡಿ ನಿರ್ಮಾಣ.
2. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ.
3. ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು.
4. ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆಗೆ ಸ್ಥಳೀಯ ಸಂಸ್ಥೆಯ ಸುಪರ್ದಿಗೆ ನೀಡುವುದು)

ಮೇಲೆ ಓದಲಾದ ಕ್ರ.ಸಂ(4)ರಲ್ಲಿನ ಏಕಕಡತದಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು 2023-24ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-180ರಲ್ಲಿ ಘೋಷಿಸಿರುವಂತೆ ಹಾಗೂ ಆರ್ಥಿಕ ಇಲಾಖೆಯು ಆಯವ್ಯಯ ಸಲಹಾ ಟಿಪ್ಪಣಿ ಸಂಖ್ಯೆ: ಆಇ 08 ವೆಚ್ಚ-3/2023 ದಿ:05.08.2023ರಲ್ಲಿ ಅಲ್ಪಸಂಖ್ಯಾತರಿಗಾಗಿ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಅಭಿವೃದ್ಧಿ ಯೋಜನೆಯ ಲೆಕ್ಕಶೀರ್ಷಿಕೆ 4225-04-102-0-02 ರಡಿ ರೂ.50.00 ಕೋಟಿಗಳಲ್ಲಿ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಆರ್ಥಿಕ ಇಲಾಖೆಯು ತಿಳಿಸಿರುವುದಾಗಿ ಹಾಗೂ ಸದರಿ ಕಾಲೋನಿಗಳ ಅಭಿವೃದ್ಧಿಗಾಗಿ ಸಂಬಂಧಿತ ಮತಕ್ಷೇತ್ರಗಳ ಮಾನ್ಯ ಸಚಿವರು / ಶಾಸಕರಿಂದ ಅನುದಾನ ಬಿಡುಗಡೆ ಕೋರಿ ಸ್ವೀಕರಿಸಿದ ಪ್ರಸ್ತಾವನೆಗಳನ್ನು ಜಿಲ್ಲಾ ಅಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರು ಜಿಲ್ಲಾಧಿಕಾರಿಗಳಿಂದ ಅನುಮೋದನೆ ಪಡೆದು ನಿರ್ದೇಶನಾಲಯಕ್ಕೆ ಸಲ್ಲಿಸುವಂತೆ ಸೂಚಿಸುತ್ತಾ, ಈ ಯೋಜನೆಯಡಿ ಗ್ರಾಮ, ಪಟ್ಟಣ, ಪುರಸಭೆ ಹಾಗೂ ನಗರ ಸಭೆ ವ್ಯಾಪ್ತಿಯಲ್ಲಿನ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುತ್ತಿರುವ ಸ್ಲಂ/ಕಾಲೋನಿಗಳಲ್ಲಿ ಮೂಲಭೂತ ಸೌಲಭ್ಯಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿ, ಮುಖ್ಯಮಂತ್ರಿಗಳ ವಿಶೇಷ ಅಭಿವೃದ್ಧಿ ಯೋಜನೆಯಡಿ ಎಲ್ಲಾ ಜಿಲ್ಲೆಯ 224 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿರುವ ಸ್ಥಳಗಳಲ್ಲಿ ಅಲ್ಪಸಂಖ್ಯಾತರ ಕಾಲೋನಿಗಳ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿ ಕೈಗೊಂಡು ಅನುಷ್ಠಾನಗೊಳಿಸಲು ಸೂಕ್ತ ಮಾರ್ಗಸೂಚಿಗಳೊಂದಿಗೆ ಸರ್ಕಾರಿ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 352(2) MDS 2023 ಬೆಂಗಳೂರು ದಿನಾಂಕ:17.10.2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮುಖ್ಯಮಂತ್ರಿಗಳ ವಿಶೇಷ ಅಭಿವೃದ್ಧಿ ಯೋಜನೆಯ ಅಡಿಯಲ್ಲಿ ಎಲ್ಲಾ ಜಿಲ್ಲೆಯ 224 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿರುವ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಈ ಕೆಳಕಂಡ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಅನುಬಂಧದಲ್ಲಿರುವ ಮಾರ್ಗಸೂಚಿಗಳನ್ವಯ ಕೈಗೊಂಡು ಅನುಷ್ಠಾನಗೊಳಿಸಲು ಸರ್ಕಾರದ ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶಿಸಿದೆ.

1. ರಸ್ತೆ ಮತ್ತು ಚರಂಡಿ/ ಒಳಚರಂಡಿ ನಿರ್ಮಾಣ.
2. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ.
3. ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು.
4. ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆಗೆ ಸ್ಥಳೀಯ ಸಂಸ್ಥೆಯ ಸುಪರ್ದಿಗೆ ನೀಡುವುದು)

ಇದಕ್ಕೆ ತಗಲುವ ವೆಚ್ಚವನ್ನು 2023-24ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ 4225-04-102-0-02 ರಡಿಯಲ್ಲಿ ಒದಗಿಸಿರುವ ರೂ.50.00 ಕೋಟಿಗಳ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

...3

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 764 ವೆಚ್ಚ-3/2023 ದಿ:06.10.2023ರಲ್ಲಿ ಮತ್ತು ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 79 ಐಎಂಎಂ 2023 ದಿ:26.09.2023 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ದಿ 17/10/2023

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವಸಂತನಗರ, ಬೆಂಗಳೂರು.
3. ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಹಜ್ ಸಮಿತಿ, ಹಜ್ ಭವನ, ತಿರುಮೇನಹಳ್ಳಿ, ಬೆಂಗಳೂರು.
4. ಎಲ್ಲಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.
5. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

# ಅನುಬಂಧ

## ಸರ್ಕಾರದ ಆದೇಶ ಸಂಖ್ಯೆ: MWD 352 (2) MDS 2023, ದಿನಾಂಕ: 17.10.2023.

## ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ಕೈಗೊಳ್ಳುವ ಕಾಮಗಾರಿಗಳಿಗೆ ಮಾರ್ಗಸೂಚಿಗಳು

1. ಸ್ಥಳೀಯ ವಿಧಾನಸಭಾ ಸದಸ್ಯರು/ವಿಧಾನ ಪರಿಷತ್ ಸದಸ್ಯರು ಸೂಚಿಸುವ ಕಾಮಗಾರಿಗಳನ್ನು ಪರಿಶೀಲಿಸಿ ಆಯ್ಕೆ ಮಾಡಿಕೊಳ್ಳುವುದು.
2. ಸರ್ಕಾರದ ಆದೇಶ ಹಾಗೂ ಮಾರ್ಗಸೂಚಿಗಳನ್ವಯ ಯೋಜನೆಗಳನ್ನು ಅನುಷ್ಠಾನಗೊಳಿಸುವುದು.
3. ಗ್ರಾಮೀಣ ಪ್ರದೇಶದ ಅಲ್ಪಸಂಖ್ಯಾತರ ಸಮುದಾಯದ ಜನರು ವಾಸವಾಗಿರುವ ಕಾಲೋನಿ, ಮೊಹಲ್ಲ ಮತ್ತು ಇತರೆ ಕೊಳಚೆ ಪ್ರದೇಶಗಳಿಗೆ ಆದ್ಯತೆಯನ್ನು ನೀಡಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳತಕ್ಕದ್ದು.
4. ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರ ಸ್ಥಳೀಯ ಸಂಸ್ಥೆಗಳಿಂದ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಭೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯದವರು ಶೇ 50 ರಷ್ಟು ವಾಸವಾಗಿರುವ ಬಗ್ಗೆ ದೃಢೀಕರಣ ಪಡೆಯುವುದು ಹಾಗೂ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಖಚಿತಪಡಿಸಿಕೊಳ್ಳುವುದು.
5. ಅತೀ ಅವಶ್ಯವಿರುವ/ ಅಭಿವೃದ್ಧಿ ಹೊಂದದ ಕಾಲೋನಿಗಳಿಗೆ ಮೊದಲ ಆದ್ಯತೆ ನೀಡುವುದು.
6. ಕಾಲೋನಿಗಳ ಪ್ರಸ್ತುತ ಸ್ಥಿತಿಗತಿಗಳ ಬಗ್ಗೆ, ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಅಲ್ಪಸಂಖ್ಯಾತ ಸಮುದಾಯದವರು ಶೇಕಡಾ 50 ರಷ್ಟು ವಾಸವಾಗಿರುವ ಬಗ್ಗೆ ಹಾಗೂ ಕಾಮಗಾರಿ ಪುನರಾವರ್ತಿತವಾಗದಂತೆ (Duplication) ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಕಡ್ಡಾಯವಾಗಿ ಖಾತರಿ ಪಡಿಸಿಕೊಳ್ಳುವುದು.
7. ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಈ ಯೋಜನೆಯ ಕ್ರಿಯಾ ಯೋಜನೆ ತಯಾರಿಸುವಾಗ ಸದರಿ ಯೋಜನೆಯಲ್ಲಿ ಕೈಗೊಳ್ಳುತ್ತಿರುವ ಕಾಮಗಾರಿಯನ್ನು ಸರ್ಕಾರದ ಇತರೆ ಯೋಜನೆಯಲ್ಲಿ ಸೌಲಭ್ಯ ಪಡೆದಿರುವುದಿಲ್ಲವೆಂದು ಹಾಗೂ ಕಾಮಗಾರಿಗಳು ಪುನರಾವರ್ತಿತವಾಗದಂತೆ (Duplication) ಖಾತರಿಪಡಿಸಿಕೊಂಡು ಕ್ರಿಯಾ ಯೋಜನೆಯನ್ನು ತಯಾರಿಸುವುದು.
8. ನಗರಾಭಿವೃದ್ಧಿ ಮತ್ತು ಗ್ರಾಮೀಣ ಅಭಿವೃದ್ಧಿ ಇಲಾಖೆ, ಸ್ಥಳೀಯ ಸಂಸ್ಥೆಗಳು ಕೊಳಗೇರಿ ಅಭಿವೃದ್ಧಿ ಮಂಡಳಿ, ಹೈದ್ರಾಬಾದ್-ಕರ್ನಾಟಕ ಅಭಿವೃದ್ಧಿ ಮಂಡಳಿ ಹಾಗೂ ಇತರೆ ಸರ್ಕಾರಿ ಇಲಾಖೆಗಳ ತೆಗೆದುಕೊಂಡಿರುವ ಕಾಮಗಾರಿಗಳನ್ನು ಪರಿಶೀಲಿಸಿ, ಪುನರಾವರ್ತಿತವಾಗದಂತೆ (Duplication) ದೃಢೀಕರಿಸಿರಬೇಕು.
9. ಅನುಮೋದಿಸಿದ ಕ್ರಿಯಾ ಯೋಜನೆಯನ್ನು ಅಲ್ಪಸಂಖ್ಯಾತರ ನಿರ್ದೇಶನಾಲಯಕ್ಕೆ ಸಲ್ಲಿಸುವುದು.
10. ಕಾಮಗಾರಿಗಳಿಗೆ ಸಂಬಂಧಿಸಿದಂತೆ, ಮೂರನೇ ವ್ಯಕ್ತಿ ತಪಾಸಣಾ ವರದಿ, ಕಾಮಗಾರಿ ಪ್ರಾರಂಭದ/ಪ್ರಗತಿ ಹಾಗೂ ಮುಕ್ತಾಯದ 3 ಹಂತದ ಜಿಪಿಎಸ್ ಛಾಯಾ ಚಿತ್ರಗಳೊಂದಿಗೆ ಕಾಮಗಾರಿ ಮುಕ್ತಾಯದ ವರದಿ ನೀಡಿದ ನಂತರ ಕಾಮಗಾರಿಗೆ ನಿಗಧಿಪಡಿಸಿದ ಒಟ್ಟು ಮೊತ್ತದಲ್ಲಿ ಶೇ 10 ರಷ್ಟು ಅನುದಾನವನ್ನು ಕೊನೆಯ ಕಂತಾಗಿ ಬಿಡುಗಡೆಗೊಳಿಸತಕ್ಕದ್ದು.
11. ಕಾಮಗಾರಿಗೆ ಬಿಡುಗಡೆಗೆ ಸಂಬಂಧಿಸಿದಂತೆ, ಉಪಯೋಗಿತ ಪ್ರಮಾಣ ಪತ್ರವನ್ನು ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.

12. ಕೈಗೊಳ್ಳಬೇಕಾದ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಶೇಕಡಾ 50 ರಷ್ಟು ಅನುದಾನವನ್ನು ಮೊದಲನೇ ಕಂತಾಗಿ ಬಿಡುಗಡೆ ಮಾಡುವುದು. ನಂತರ ಕಾಮಗಾರಿಯ ಪ್ರಗತಿಯನ್ನಾಧರಿಸಿ ಶೇ.40 ರಷ್ಟನ್ನು ಹಾಗೂ ಮೇಲ್ಕಂಡ ಷರತ್ತು ಸಂಖ್ಯೆ (1)ರಂತೆ ಉಳಿಕೆ ಶೇ. 10% ರಷ್ಟು ಅನುದಾನವನ್ನು ಅಂತಿಮ ಕಂತಾಗಿ ಬಿಡುಗಡೆಗೊಳಿಸತಕ್ಕದ್ದು.
13. ಈ ಕಾಮಗಾರಿಗಳ ಗುಣಮಟ್ಟದ ಬಗ್ಗೆ ಆಯಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಆಗಿಂದಾಗ ತಪಾಸಣೆ ಕೈಗೊಂಡು ಕಾಮಗಾರಿಯ ಗುಣಮಟ್ಟ ತೃಪ್ತಿಕರವಾಗಿರುವುದನ್ನು ಖಚಿತ ಪಡಿಸಿಕೊಂಡ ನಂತರ ಅನುದಾನ ಬಿಡುಗಡೆ ಮಾಡತಕ್ಕದ್ದು.
14. ಸದರಿ ಯೋಜನೆಯಡಿ ಕೈಗೊಳ್ಳಲಾಗುವ ಕಾಮಗಾರಿಗಳನ್ನು ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಮತ್ತು ಸಂಬಂಧಪಟ್ಟ ಏಜೆನ್ಸಿಯವರೊಂದಿಗೆ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರಿಸುವುದು ಮತ್ತು ಮುಂದಿನ ಸಂಪೂರ್ಣ ನಿರ್ವಹಣೆಗೆ ಜವಾಬ್ದಾರಿಯನ್ನು ಸ್ಥಳೀಯ ಸಂಸ್ಥೆಗಳಿಗೆ ವಹಿಸುವುದು.

17/10/2023

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು
ವಕ್ಫ್ ಇಲಾಖೆ.

(3)

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2023-24ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-180 ರಲ್ಲಿ ಘೋಷಿಸಿರುವಂತೆ ವಿವಿಧ ಸಮುದಾಯಗಳ ಅಭಿವೃದ್ಧಿ ಯೋಜನೆಯ ಅಡಿಯಲ್ಲಿ ವಿವಿಧ ಕಾರ್ಯಕ್ರಮಗಳನ್ನು ಕೈಗೊಳ್ಳಲು ಸರ್ಕಾರದ ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ:**
1. ಆರ್ಥಿಕ ಇಲಾಖೆಯ ಆಯವ್ಯಯ ಸಲಹಾ ಟಿಪ್ಪಣಿ ಸಂಖ್ಯೆ: ಆಇ 08 ವೆಚ್ಚ-3/2023 ದಿ:05.08.2023.
2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಏಕಕಡತ ಸಂಖ್ಯೆ: ಅಸಂನಿ/ವಿ.ಡಿ.ಪಿ/ಸಿಆರ್-10/2023-24.

*~*~*~*~*

**ಪ್ರಸ್ತಾವನೆ:-**

2023-24ನೇ ಸಾಲಿನ ಜುಲೈ ಆಯವ್ಯಯ ಭಾಷಣದ ಕಂಡಿಕೆ-180ರಲ್ಲಿ "**ಮುಖ್ಯಮಂತ್ರಿಗಳ ವಿಶೇಷ ಅಭಿವೃದ್ಧಿ ಯೋಜನೆ ಮತ್ತು ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿ ಯೋಜನೆಗಳಡಿ ವಿವಿಧ ಕಾರ್ಯಕ್ರಮಗಳನ್ನು ಕೈಗೊಳ್ಳಲು ಪ್ರಸಕ್ತ ಸಾಲಿನಲ್ಲಿ 360.00 ಕೋಟಿಗಳನ್ನು ಮೀಸಲಿಡಲಾಗುವುದು**" ಎಂದು ಘೋಷಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರ ಸಂ(1)ರಲ್ಲಿನ ಆಯವ್ಯಯ ಸಲಹಾ ಟಿಪ್ಪಣಿ ದಿ:05.08.2023ರಲ್ಲಿ ತಿಳಿಸಿರುವಂತೆ ಪ್ರಸಕ್ತ ಸಾಲಿಗೆ ವಿವಿಧ ಸಮುದಾಯಗಳ ಅಭಿವೃದ್ಧಿ ಯೋಜನೆಗೆ ಲೆಕ್ಕಶೀರ್ಷಿಕೆ 2225-04-102-0-10(059)ರ ಅಡಿಯಲ್ಲಿ ರೂ.110.00 ಕೋಟಿಗಳ ಅನುದಾನವನ್ನು ಹಂಚಿಕೆ ಮಾಡಲಾಗಿರುತ್ತದೆ.

ಅಲ್ಪಸಂಖ್ಯಾತರ ಸಮುದಾಯದ ಜನಾಂಗವು ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ಆರೋಗ್ಯ ಮತ್ತು ಇತರೆ ಕ್ಷೇತ್ರಗಳಲ್ಲಿ ಹಿಂದುಳಿದಿರುವುದರಿಂದ, ಸದರಿಯವರಿಗೆ ಈ ಕ್ಷೇತ್ರಗಳಲ್ಲಿ ಸರ್ವತೋಮುಖ ಅಭಿವೃದ್ಧಿ ಹೊಂದಲು ಹಾಗೂ ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಸಬಲೀಕರಿಸಲು ಹೆಚ್ಚು ಒತ್ತು ನೀಡಲು ವಿವಿಧ ಸಮುದಾಯಗಳ ಅಭಿವೃದ್ಧಿ ಯೋಜನೆಯಡಿ ಕಾರ್ಯಕ್ರಮಗಳನ್ನು ಜಾರಿಗೊಳಿಸಲು ಉದ್ದೇಶಿಸಲಾಗಿರುವುದರಿಂದ ಲೆಕ್ಕಶೀರ್ಷಿಕೆ 2225-04-102-0-10(059) ವಿವಿಧ ಸಮುದಾಯಗಳ ಅಭಿವೃದ್ಧಿ ರಾಜ್ಯವಲಯ ಯೋಜನೆಯಡಿ ಅನುದಾನ ಬಿಡುಗಡೆ ಮಾಡಿ ಮಾರ್ಗಸೂಚಿಗಳೊಂದಿಗೆ ಸರ್ಕಾರಿ ಆದೇಶವನ್ನು ಹೊರಡಿಸುವಂತೆ ಕೋರಿ ಮೇಲೆ ಓದಲಾದ ಕ್ರ ಸಂ(2) ರಲ್ಲಿನ ಏಕಕಡತದಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಅದರಂತೆ, ಸದರಿ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 352 (3) MDS 2023 ಬೆಂಗಳೂರು ದಿನಾಂಕ: 17.10.2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಅಲ್ಪಸಂಖ್ಯಾತರ ಸಮುದಾಯದವರಿಗೆ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ಆರೋಗ್ಯ ಮತ್ತು ಇತರೆ ಕ್ಷೇತ್ರಗಳಲ್ಲಿ ಸರ್ವತೋಮುಖ ಅಭಿವೃದ್ಧಿ ಹೊಂದಲು ಹಾಗೂ ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಸಬಲೀಕರಿಸಲು ಹೆಚ್ಚು ಒತ್ತು ನೀಡುವ ಕಾರ್ಯಕ್ರಮಗಳನ್ನು ವಿವಿಧ ಸಮುದಾಯಗಳ ಅಭಿವೃದ್ಧಿ ಯೋಜನೆಯಡಿ ಅನುಷ್ಠಾನಗೊಳಿಸಲು ಸರ್ಕಾರದ ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶಿಸಿದೆ.

...2

Scanned with OKEN Scanner

2023-24ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ 2225-04-102-0-10(059) ವಿವಿಧ ಸಮುದಾಯಗಳ ಅಭಿವೃದ್ಧಿ ರಾಜ್ಯವಲಯ ಯೋಜನೆಯಡಿ ಒದಗಿಸಿರುವ ರೂ.110.00 ಕೋಟಿಗಳ ಅನುದಾನದ ಮಿತಿಯಲ್ಲಿ ಮೇಲ್ಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸತಕ್ಕದ್ದು.

ಸದರಿ ಯೋಜನೆಯ ಕುರಿತಂತೆ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಯೋಜನೆಗಳನ್ನು ಅನುಷ್ಠಾನಗೊಳಿಸುವ ಮುನ್ನ ಕಾಲಕಾಲಕ್ಕೆ ಅಗತ್ಯ ಮಾರ್ಗಸೂಚಿಗಳನ್ನು ಸರ್ಕಾರದ ಅನುಮೋದನೆ ಪಡೆದು ನಿಯಮಾನುಸಾರ ಹೊರಡಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 764 ವೆಚ್ಚ-3/2023 ದಿ:06.10.2023ರಲ್ಲಿ ಮತ್ತು ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 79 ಐಎಂಎಂ 2023 ದಿ:26.09.2023 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

17/10/2023
(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವಸಂತನಗರ, ಬೆಂಗಳೂರು.
3. ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಹಜ್ ಸಮಿತಿ, ಹಜ್ ಭವನ, ತಿರುಮೇನಹಳ್ಳಿ, ಬೆಂಗಳೂರು.
4. ಎಲ್ಲಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.
5. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

Scanned with OKEN Scanner

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2023-24ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಾಲೋನಿಗಳ ಸಮಗ್ರ ಅಭಿವೃದ್ಧಿ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:MWD 352(1) MDS 2023, ದಿ:17.10.2023.
2. ಸರ್ಕಾರದ ಆದೇಶ ಸಂಖ್ಯೆ: MWD 352(2) MDS 2023, ದಿ:17.10.2023.
3. ಸರ್ಕಾರದ ಆದೇಶ ಸಂಖ್ಯೆ: MWD 352(3) MDS 2023, ದಿ:17.10.2023.
4. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಏಕಕಡತ ಸಂಖ್ಯೆ:DOM/ACC/1/2023 (e-office).
5. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಟಿಪ್ಪಣಿ ಸಂಖ್ಯೆ:ವವ&ಅಸ/ಟಿ/1237/2024, ದಿ:04.01.2024.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (2)ರಲ್ಲಿನ ಆದೇಶಗಳಲ್ಲಿ ರಾಜ್ಯದ 11 ಕಾರ್ಪೋರೇಷನ್‌ಗಳಲ್ಲಿ ಅಲ್ಪಸಂಖ್ಯಾತರ ಸ್ಲಂ/ ಕಾಲೋನಿ ಅಭಿವೃದ್ಧಿ ಯೋಜನೆ ಹಾಗೂ ಮುಖ್ಯಮಂತ್ರಿಗಳ ವಿಶೇಷ ಅಭಿವೃದ್ಧಿ ಯೋಜನೆಯನ್ನು ರಾಜ್ಯದ 11 ಮಹಾನಗರ ಪಾಲಿಕೆಗಳನ್ನೊಳಗೊಂಡಂತೆ ಎಲ್ಲಾ 224 ವಿಧಾನಸಭಾ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರ ಸಭೆಗಳಲ್ಲಿನ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಈ ಕೆಳಕಂಡ ಮೂಲಸೌಕರ್ಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿ ಆದೇಶಿಸಿದೆ.

1. ರಸ್ತೆ ಮತ್ತು ಚರಂಡಿ/ ಒಳಚರಂಡಿ ನಿರ್ಮಾಣ.
2. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ.
3. ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು.
4. ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆಗೆ ಸ್ಥಳೀಯ ಸಂಸ್ಥೆಯ ಸುಪರ್ದಿಗೆ ನೀಡುವುದು)

ಅಲ್ಪಸಂಖ್ಯಾತರ ಸಮುದಾಯದವರಿಗೆ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ಆರೋಗ್ಯ ಮತ್ತು ಇತರೆ ಕ್ಷೇತ್ರಗಳಲ್ಲಿ ಸರ್ವತೋಮುಖ ಅಭಿವೃದ್ಧಿ ಹೊಂದಲು ಹಾಗೂ ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಸಬಲೀಕರಿಸಲು ಹೆಚ್ಚು ಒತ್ತು ನೀಡುವ ಕಾರ್ಯಕ್ರಮಗಳನ್ನು ಉಲ್ಲೇಖಿತ (2)ರಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಯೋಜನೆಯಡಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಏಕಕಡತದಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಸನ್ಮಾನ್ಯ ಮುಖ್ಯಮಂತ್ರಿಗಳು ದಿನಾಂಕ:10.10.2023 ಮತ್ತು 29.12.2023ರಂದು ನಡೆದ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುತ್ತಿರುವ ಕಾಲೋನಿಗಳ ಸಮಗ್ರವಾದ ಅಭಿವೃದ್ಧಿಗಾಗಿ ರೂ.1000.00



Scanned with OKEN Scanner

ಕೋಟಿಗಳ ಕ್ರಿಯಾ ಯೋಜನೆ ತಯಾರಿಸಲು ಸೂಚಿಸಿದ್ದರ ಮೇರೆಗೆ, 11 ಕಾರ್ಪೊರೇಷನ್‌ಗಳಲ್ಲಿ ಅಲ್ಪಸಂಖ್ಯಾತರ ಸ್ಲಂ/ ಕಾಲೋನಿ ಅಭಿವೃದ್ಧಿ ಯೋಜನೆ, ಅಲ್ಪಸಂಖ್ಯಾತರಿಗಾಗಿ ಮುಖ್ಯಮಂತ್ರಿ ವಿಶೇಷ ಅಭಿವೃದ್ಧಿ ಯೋಜನೆ ಮತ್ತು ಅಲ್ಪಸಂಖ್ಯಾತರಿಗಾಗಿ ವಿವಿಧ ಅಭಿವೃದ್ಧಿ ಕಾರ್ಯಕ್ರಮ ಯೋಜನೆಗಳಡಿ ವಿಧಾನಸಭಾ ಕ್ಷೇತ್ರವಾರು ಒಟ್ಟು ರೂ.1000.00 ಕೋಟಿಗಳ ಕ್ರಿಯಾ ಯೋಜನೆಯನ್ನು ತಯಾರಿಸಿ, ಕ್ರಿಯಾ ಯೋಜನೆಯ ಅನುಮೋದನೆ ಕೋರಿ ಹಾಗೂ ಲೆಕ್ಕಶೀರ್ಷಿಕೆ 4225-04-102-0-02(132), 4225-04-102-0-01(386) ಮತ್ತು 2225-04-102-0-10(059)ಗಳಡಿ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಅಲ್ಪಸಂಖ್ಯಾತರ ಸ್ಲಂ/ ಕಾಲೋನಿ ಅಭಿವೃದ್ಧಿ ಯೋಜನೆಯಡಿಯಲ್ಲಿ ರಾಜ್ಯದ ಮಹಾನಗರ ಪಾಲಿಕೆ, ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಮತ್ತು ಗ್ರಾಮಗಳ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತರ ಸಮುದಾಯದವರು ಹೆಚ್ಚಾಗಿ ವಾಸಿಸುತ್ತಿರುವ ಕಾಲೋನಿ, ಮೊಹಲ್ಲಾ ಮತ್ತು ಇತರೆ ಕೊಳಚೆ ಪ್ರದೇಶಗಳು ಮೂಲಭೂತ ಸೌಕರ್ಯವಿಲ್ಲದೇ ಅತ್ಯಂತ ಹಿಂದುಳಿದಿದ್ದು ಅಂತಹ ದುಸ್ಥಿತಿಯಲ್ಲಿರುವ ಕಾಲೋನಿಗಳನ್ನು ಗುರುತಿಸಿ ಕ್ರಿಯಾ ಯೋಜನೆಯನ್ನು ರೂಪಿಸಿಕೊಂಡು ಸದರಿ ಕಾಲೋನಿಗಳಲ್ಲಿ ರಸ್ತೆ ಕುಡಿಯುವ ನೀರು, ಚರಂಡಿ/ ಒಳ ಚರಂಡಿಗಳನ್ನೊಳಗೊಂಡಂತೆ ಸಮಗ್ರವಾದ ಕಾಲೋನಿ ಅಭಿವೃದ್ಧಿ ಪಡಿಸಲು ಸೂಕ್ತ ಮಾರ್ಗಸೂಚಿಗಳನ್ನು ಹೊರಡಿಸುವಂತೆ ಹಾಗೂ ಯಾವುದೇ ಕಾರಣಕ್ಕೂ ತುಂಡು ಕಾಮಗಾರಿಗಳನ್ನು ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಳ್ಳದಿರಲು ಮೇಲೆ ಓದಲಾದ ಕ್ರಮ ಸಂಖ್ಯೆ(5)ರಲ್ಲಿನ ಟಿಪ್ಪಣಿಯಲ್ಲಿ ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಸೂಚಿಸಿರುತ್ತಾರೆ. ಸದರಿ ಕ್ರಿಯಾ ಯೋಜನೆಗೆ ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಮುಖಾಂತರ ಮಾನ್ಯ ಮುಖ್ಯಮಂತ್ರಿಯವರ ಅನುಮೋದನೆಯನ್ನು ಪಡೆಯಲಾಗಿರುತ್ತದೆ. ಆದ್ದರಿಂದ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: MWD 558 MDS 2023, ಬೆಂಗಳೂರು ದಿ:24.01.2024.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2023-24ನೇ ಸಾಲಿನಿಂದ ಮುಂದಿನ 03 ವರ್ಷಗಳ ಅವಧಿಗೆ ಅಲ್ಪಸಂಖ್ಯಾತರ ಕಾಲೋನಿಗಳ ಸಮಗ್ರ ಅಭಿವೃದ್ಧಿ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು 11 ಕಾರ್ಪೊರೇಷನ್‌ಗಳಲ್ಲಿ ಅಲ್ಪಸಂಖ್ಯಾತರ ಸ್ಲಂ/ ಕಾಲೋನಿ ಅಭಿವೃದ್ಧಿ ಯೋಜನೆ, ಅಲ್ಪಸಂಖ್ಯಾತರಿಗಾಗಿ ಮುಖ್ಯಮಂತ್ರಿ ವಿಶೇಷ ಅಭಿವೃದ್ಧಿ ಯೋಜನೆ ಮತ್ತು ಅಲ್ಪಸಂಖ್ಯಾತರಿಗಾಗಿ ವಿವಿಧ ಅಭಿವೃದ್ಧಿ ಕಾರ್ಯಕ್ರಮ ಯೋಜನೆಗಳಡಿ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದಲ್ಲಿ ತಿಳಿಸಿರುವಂತೆ ವಿಧಾನಸಭಾ ಕ್ಷೇತ್ರವಾರು ಒಟ್ಟು ರೂ.1000.00 ಕೋಟಿಗಳ ಕ್ರಿಯಾ ಯೋಜನೆಗೆ ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

2. ರಾಜ್ಯದ ಮಹಾನಗರ ಪಾಲಿಕೆ, ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಮತ್ತು ಗ್ರಾಮಗಳ ವ್ಯಾಪ್ತಿಯಲ್ಲಿ ಮೂಲಭೂತ ಸೌಕರ್ಯವಿಲ್ಲದೇ ಅತ್ಯಂತ ದುಸ್ಥಿತಿಯಲ್ಲಿರುವ ಅಲ್ಪಸಂಖ್ಯಾತರ ಸಮುದಾಯದವರು ಹೆಚ್ಚಾಗಿ ವಾಸಿಸುತ್ತಿರುವ ಕಾಲೋನಿ, ಮೊಹಲ್ಲಾ ಮತ್ತು ಇತರೆ ಕೊಳಚೆ ಪ್ರದೇಶ/ ಕಾಲೋನಿಗಳನ್ನು ಗುರುತಿಸಿ ಕ್ರಿಯಾ ಯೋಜನೆಯನ್ನು ರೂಪಿಸಿಕೊಂಡು ಸದರಿ ಕಾಲೋನಿಗಳಲ್ಲಿ ರಸ್ತೆ, ಕುಡಿಯುವ ನೀರು, ಚರಂಡಿ/ ಒಳ ಚರಂಡಿಗಳನ್ನೊಳಗೊಂಡಂತೆ ಸಮಗ್ರವಾದ

.....3

Scanned with OKEN Scanne

ಕಾಲೋನಿ ಅಭಿವೃದ್ಧಿ ಪಡಿಸಲು ಚಾಲ್ತಿಯಲ್ಲಿರುವ ಮಾರ್ಗಸೂಚಿಗಳನ್ವಯ ಕ್ರಮಕೈಗೊಳ್ಳತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ತುಂಡು ಕಾಮಗಾರಿಗಳನ್ನು ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಳ್ಳತಕ್ಕದ್ದಲ್ಲ.

3. 11 ಕಾರ್ಪೊರೇಷನ್‌ಗಳಲ್ಲಿ ಅಲ್ಪಸಂಖ್ಯಾತರ ಸ್ಲಂ/ ಕಾಲೋನಿ ಅಭಿವೃದ್ಧಿ ಯೋಜನೆ ಮತ್ತು ಅಲ್ಪಸಂಖ್ಯಾತರಿಗಾಗಿ ಮುಖ್ಯಮಂತ್ರಿ ವಿಶೇಷ ಅಭಿವೃದ್ಧಿ ಯೋಜನೆಯಡಿಲ್ಲಿನ ಅನುದಾನಕ್ಕೆ ಅನುಗುಣವಾಗಿ 4:1 ಅನುಪಾತದಲ್ಲಿ ಕ್ರಮವಾಗಿ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿನ ಕಾಲೋನಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳತಕ್ಕದ್ದು.

4. ಸದರಿ ಕ್ರಿಯಾ ಯೋಜನೆಗೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ 4225-04-102-0-02(132), 4225-04-102-0-01(386) ಮತ್ತು 2225-04-102-0-10(059)ರಡಿ ಪ್ರಸಕ್ತ ಸಾಲಿನಲ್ಲಿ ಒದಗಿಸಿರುವ ಅನುದಾನವು ಸೇರಿದಂತೆ ಮುಂದಿನ 03 ವರ್ಷಗಳಲ್ಲಿ ಒದಗಿಸುವ ಅನುದಾನದಲ್ಲಿ ಹಂತ ಹಂತವಾಗಿ ಭರಿಸತಕ್ಕದ್ದು.

5. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಅನುಮೋದಿತ ಕ್ರಿಯಾ ಯೋಜನೆಯ ಪ್ರಕಾರ ವಿಧಾನಸಭಾ ಕ್ಷೇತ್ರವಾರು/ ಕಾಮಗಾರಿವಾರು ಪ್ರತ್ಯೇಕವಾಗಿ ಆದೇಶಗಳನ್ನು, ಪುನಃ ಸರ್ಕಾರಕ್ಕೆ ಸಲ್ಲಿಸದೇ ತಮ್ಮ ಹಂತದಲ್ಲಿಯೇ ಹೊರಡಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಹಿಂಬಹರ ಸಂಖ್ಯೆ: ಎಫ್‌ಡಿ 930 ವೆಚ್ಚ-3/2023 ದಿ:16.01.2024ರಲ್ಲಿ ನೀಡಿರುವ ಅಭಿಪ್ರಾಯದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

24/1/2024.

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಆ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
3. ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
4. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವಸಂತನಗರ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3 & 9), ವಿಧಾನಸೌಧ, ಬೆಂಗಳೂರು.
6. ಎಲ್ಲಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.
7. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

Scanned with OKEN Scanner

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಬೆಂಗಳೂರು ಸೇರಿದಂತೆ ರಾಜ್ಯದ 10 ಮಹಾನಗರ ಪಾಲಿಕೆಗಳಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಿಯಾ ಯೋಜನೆಯನ್ನು ರೂಪಿಸಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡುವ ಕುರಿತು.

ಓದಲಾಗಿದೆ:
1. 2020-21ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ:91
2. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಬೆಂಗಳೂರು ಇವರು ಸಲ್ಲಿಸಿರುವ ಏಕಕಡತ ಪ್ರಸ್ತಾವನೆ ಸಂಖ್ಯೆ: ಅಸಂನಿ/ಕೊಳಚೆ.ಪ್ರ/ ಸಿಆರ್-5/2020-21 ದಿನಾಂಕ:12-05-2020.
3. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 94 ವೆಚ್ಚ-3/ 2020, ದಿನಾಂಕ:30-05-2020.
4. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 164 ವೆಚ್ಚ-3/ 2020, ದಿನಾಂಕ:02-12-2020.

*~*~*~*~*~*

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು 2020-21ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-91ರಲ್ಲಿ. "ಬೆಂಗಳೂರು ಸೇರಿದಂತೆ ರಾಜ್ಯದ 10 ಮಹಾನಗರ ಪಾಲಿಕೆಗಳಲ್ಲಿ ಅಧಿಸೂಚಿತವಲ್ಲದ ಹಲವಾರು ಕೊಳಗೇರಿ ಪ್ರದೇಶಗಳು ಇರುತ್ತವೆ. ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿ ವಾಸವಿರುವ ಇಂತಹ ಕೊಳಚೆ ಪ್ರದೇಶಗಳನ್ನು ಅಭಿವೃದ್ಧಿಪಡಿಸುವುದು ಈ ಉದ್ದೇಶಕ್ಕಾಗಿ 2020-21ನೇ ಸಾಲಿನಲ್ಲಿ 200 ಕೋಟಿ ರೂ.ಗಳ ಅನುದಾನವನ್ನು ಮೀಸಲಿಡಲಾಗಿದೆ" ಎಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ರಾಜ್ಯದ ನಗರ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತ ಸಮುದಾಯದವರು ಹೆಚ್ಚಾಗಿ ವಾಸಿಸುತ್ತಿರುವ ಕೊಳಗೇರಿ ಪ್ರದೇಶಗಳು ಪ್ರಮುಖ ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿದ್ದು, ಅಂತಹ ಅಧಿಸೂಚಿತವಲ್ಲದ ಕೊಳಗೇರಿ ಪ್ರದೇಶಗಳಲ್ಲಿ ಈ ಕೆಳಕಂಡ ಮೂಲಭೂತ ಸೌಕರ್ಯ ಕಾಮಗಾರಿಗಳನ್ನು ಕೈಗೊಳ್ಳುವಂತೆ ಕೋರಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಏಕಕಡತ ಪದ್ಧತಿಯಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

1. ರಸ್ತೆ ಮತ್ತು ಚರಂಡಿ/ ಒಳಚರಂಡಿ ನಿರ್ಮಾಣ.
2. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು.

3. ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು.
4. ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆಗೆ ಸ್ಥಳೀಯ ಸಂಸ್ಥೆಯ ಸುಪರ್ದಿಗೆ ನೀಡುವುದು)

2020-21ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ ಸದರಿ ಯೋಜನೆಗೆ ರೂ.200.00ಕೋಟಿಗಳನ್ನು ಘೋಷಿಸಿದ್ದು, ಮೇಲೆ ಓದಲಾದ ಕ್ರಮ ಸಂಖ್ಯೆ(3)ರಲ್ಲಿ ಆರ್ಥಿಕ ಇಲಾಖೆಯ ಪರಿಷ್ಕೃತ ಆಯವ್ಯಯ ಸಲಹಾ ಟಿಪ್ಪಣಿಯಲ್ಲಿ ಸದರಿ ಯೋಜನೆಗೆ ರೂ.100.00ಕೋಟಿಗಳನ್ನು ಮೀಸಲಿರಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(4)ರಲ್ಲಿ ಆರ್ಥಿಕ ಇಲಾಖೆಯ ಪರಿಷ್ಕೃತ ಆಯವ್ಯಯ ಸಲಹಾ ಟಿಪ್ಪಣಿಯಲ್ಲಿ ಸದರಿ ಯೋಜನೆಗೆ ರೂ.50.00ಕೋಟಿಗಳನ್ನು ಮೀಸಲಿರಿಸಲಾಗಿರುತ್ತದೆ.

ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 169 ಎಂಡಿಎಸ್ 2020,**

**ಬೆಂಗಳೂರು, ದಿನಾಂಕ: 16-12-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸನ್ಮಾನ್ಯ ಮುಖ್ಯಮಂತ್ರಿಯವರು 2020-21ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-91ರಲ್ಲಿ ಘೋಷಿಸಿರುವಂತೆ, ಬೆಂಗಳೂರು ಸೇರಿದಂತೆ ರಾಜ್ಯದ ಈ ಕೆಳಕಂಡ 11 ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಅಧಿಸೂಚಿತವಲ್ಲದ ಕೊಳಗೇರಿ ಪ್ರದೇಶಗಳಲ್ಲಿ ರೂ.50.00ಕೋಟಿಗಳ ಕ್ರಿಯಾ ಯೋಜನೆಗಳನ್ನು ಈ ಕೆಳಕಂಡ ಮೂಲಸೌಕರ್ಯಗಳನ್ನು ಒದಗಿಸಲು ಅನುಬಂಧದಲ್ಲಿರುವ ಮಾರ್ಗಸೂಚಿಗಳು ಹಾಗೂ ಈ ಕೆಳಕಂಡ ಷರತ್ತುಗಳೊಂದಿಗೆ ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

| ಕ್ರ ಸಂ | ಜಿಲ್ಲೆ | ಮಹಾನಗರ ಪಾಲಿಕೆ | ಕಾಮಗಾರಿಗಳನ್ನು ಕೈಗೊಳ್ಳಲು ಅಂದಾಜು ಮೊತ್ತ (ರೂ.ಕೋಟಿಗಳಲ್ಲಿ) |
|---|---|---|---|
| 1 | ಬೆಂಗಳೂರು ನಗರ | ಬಿ.ಬಿ.ಎಂ.ಪಿ | 20.00 |
| 2 | ಧಾರವಾಡ | ಧಾರವಾಡ | 2.50 |
| 3 | ಮೈಸೂರು | ಮೈಸೂರು | 3.00 |
| 4 | ದಕ್ಷಿಣಕನ್ನಡ | ದಕ್ಷಿಣಕನ್ನಡ | 3.00 |
| 5 | ಕಲಬುರಗಿ | ಕಲಬುರಗಿ | 3.00 |
| 6 | ಶಿವಮೊಗ್ಗ | ಶಿವಮೊಗ್ಗ | 3.00 |
| 7 | ತುಮಕೂರು | ತುಮಕೂರು | 2.50 |
| 8 | ವಿಜಯಪುರ | ವಿಜಯಪುರ | 3.00 |
| 9 | ಬೆಳಗಾವಿ | ಬೆಳಗಾವಿ | 3.00 |
| 10 | ಬಳ್ಳಾರಿ | ಬಳ್ಳಾರಿ | 3.00 |
| 11 | ದಾವಣಗೆರೆ | ದಾವಣಗೆರೆ | 3.00 |
| 12 | ಶೇ.1ರಷ್ಟು ಐ.ಸಿ.ಡಿ. ಶುಲ್ಕ | - | 1.00 |
| | | ಒಟ್ಟು | 50.00 |

.....3

1. ರಸ್ತೆ ಮತ್ತು ಚರಂಡಿ/ ಒಳಚರಂಡಿ ನಿರ್ಮಾಣ.
2. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು.
3. ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು.
4. ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆಗೆ ಸ್ಥಳೀಯ ಸಂಸ್ಥೆಯ ಸುಪರ್ದಿಗೆ ನೀಡುವುದು)

ಮೇಲ್ಕಂಡ ಮಹಾನಗರ ಪಾಲಿಕೆಗಳ ವ್ಯಾಪ್ತಿಗೆ ಬರುವ ಪ್ರತಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಅಧಿಸೂಚಿತವಲ್ಲದ ಕೊಳಗೇರಿ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕೈಗೊಳ್ಳಲು ತಲಾ ರೂ.25.00ಲಕ್ಷಗಳನ್ನು (ಇಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ) ಮಂಜೂರು ಮಾಡಿ ಆದೇಶಿಸಿದೆ.

<u>ಷರತ್ತುಗಳು</u>

1. ನಗರ ಪ್ರದೇಶ ವ್ಯಾಪ್ತಿಯ ಅಧಿಸೂಚಿತವಲ್ಲದ ಕೊಳಗೇರಿ ಪ್ರದೇಶಗಳಲ್ಲಿ ಅಲ್ಪಸಂಖ್ಯಾತ ಸಮುದಾಯದವರು ಶೇ.50 ರಷ್ಟು ವಾಸವಾಗಿರಬೇಕು.
2. ನಗರ ಪ್ರದೇಶ ವ್ಯಾಪ್ತಿಯ ಅಧಿಸೂಚಿತವಲ್ಲದ ಕೊಳಚೆ ಪ್ರದೇಶಗಳು ಅಲ್ಪಸಂಖ್ಯಾತರ ಸಮುದಾಯದ ಜನರು ವಾಸವಾಗಿರುವ ಕಾಲೋನಿ, ಕೇರಿ, ಮೊಹಲ್ಲಾ ಮತ್ತು ಇತರೆ ಕೊಳಚೆ ಪ್ರದೇಶಗಳಿಗೆ ಆದ್ಯತೆಯನ್ನು ನೀಡಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳತಕ್ಕದ್ದು.
3. ನಗರಾಭಿವೃದ್ಧಿ ಸ್ಥಳೀಯ ಸಂಸ್ಥೆಗಳು, ಕೊಳಗೇರಿ ಅಭಿವೃದ್ಧಿ ಮಂಡಳಿ, ಕಲ್ಯಾಣ-ಕರ್ನಾಟಕ ಅಭಿವೃದ್ಧಿ ಮಂಡಳಿ ಹಾಗೂ ಇತರೆ ಸರ್ಕಾರಿ ಇಲಾಖೆಗಳು ತೆಗೆದುಕೊಂಡಿರುವ ಕಾಮಗಾರಿಯನ್ನು ಪುನರಾವರ್ತನೆಯಾಗದಂತೆ (Duplication) ನೋಡಿಕೊಳ್ಳತಕ್ಕದ್ದು.
4. ಅಲ್ಪಸಂಖ್ಯಾತರ ಸಮುದಾಯದ ಜನರು ವಾಸವಾಗಿರುವ ಕಾಲೋನಿ, ಕೇರಿ ಮತ್ತು ಮೊಹಲ್ಲಾಗಳಲ್ಲಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರು ಕಾಮಗಾರಿಗಳನ್ನು ಪರಿಶೀಲಿಸಿ, ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಂದ ದೃಢೀಕರಿಸಿರಬೇಕು.
5. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರು ಈ ಯೋಜನೆಯ ಕ್ರಿಯಾ ಯೋಜನೆ ತಯಾರಿಸುವಾಗ ಸದರಿ ಯೋಜನೆಯಲ್ಲಿ ಕೈಗೊಳ್ಳುತ್ತಿರುವ ಕಾಮಗಾರಿಯನ್ನು ಕರ್ನಾಟಕ ಸರ್ಕಾರದ ಇತರೆ ಯೋಜನೆಯಲ್ಲಿ ಸೌಲಭ್ಯ ಪಡೆದಿರುವುದಿಲ್ಲವೆಂದು ದೃಢೀಕರಿಸತಕ್ಕದ್ದು.
6. ಐ.ಸಿ.ಟಿ ಕಾರ್ಯಕ್ರಮ ರೂಪಿಸಿ, ಯೋಜನೆಯ ಪ್ರಚಾರ, ಜಾಹೀರಾತು, ಪ್ರಕಟಣೆಗಳನ್ನು ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ನೀಡುವುದು
7. ಈ ಕಾಮಗಾರಿಗಳ ಗುಣಮಟ್ಟದ ಬಗ್ಗೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು, ಆಗಿಂದಾಗ್ಗೆ ತಪಾಸಣೆ ಕೈಗೊಂಡು ಕಾಮಗಾರಿಯ ಗುಣಮಟ್ಟ ತೃಪ್ತಿಕರವಾಗಿರುವುದನ್ನು ಖಚಿತ ಪಡಿಸಿಕೊಂಡ ನಂತರವೇ ಅನುದಾನ ಬಿಡುಗಡೆ ಮಾಡತಕ್ಕದ್ದು.
8. ಕಾಮಗಾರಿಗಳ ಗುಣಮಟ್ಟದ ಬಗ್ಗೆ 3ನೇ ವ್ಯಕ್ತಿಯ ತಪಾಸಣೆಯನ್ನು ಕೈಗೊಳ್ಳತಕ್ಕದ್ದು.

......4

## ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 169 ಎಂಡಿಎಸ್ 2020, ದಿನಾಂಕ:16-12-2020ಕ್ಕೆ

## ಅನುಬಂಧ

### ಮಾರ್ಗಸೂಚಿಗಳು

ಕ್ರಿಯಾ ಯೋಜನೆಗಳನ್ನು ರೂಪಿಸಿ ಸ್ಥಾಪಿಸಲಾದ ಬೆಂಗಳೂರು ಸೇರಿದಂತೆ 10 ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಜಿಲ್ಲಾ ಮಟ್ಟದ ಸಮಿತಿ (District Level Committee)

| | | |
|---|---|---|
| 1 | ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2 | ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ | ಸದಸ್ಯರು |
| 3 | ಆಯುಕ್ತರು, ಬಿಬಿಎಂಪಿ/ ಮಹಾನಗರ ಪಾಲಿಕೆ | ಸದಸ್ಯರು |
| 4 | ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಇಲಾಖೆ (ಪಿ.ಡಬ್ಲ್ಯೂಡಿ) | ಸದಸ್ಯರು |
| 5 | ಸಂಬಂಧಪಟ್ಟ ಏಜೆನ್ಸಿ | ಸದಸ್ಯರು |
| 6 | ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ | ಸಂಚಾಲಕರು/ಸದಸ್ಯ ಕಾರ್ಯದರ್ಶಿ |

**ಜಿಲ್ಲಾ ಮಟ್ಟದ ಸಮಿತಿಯ ಪ್ರಕಾರ್ಯಗಳು:**

1. ಈ ಜಿಲ್ಲಾ ಮಟ್ಟದ ಸಮಿತಿಯು ಸದರಿ ಸರ್ಕಾರದ ಆದೇಶ ಹಾಗೂ ಮಾರ್ಗಸೂಚಿಗಳನ್ವಯ ಯೋಜನೆಗಳನ್ನು ಅನುಷ್ಠಾನಗೊಳಿಸುವುದು.
2. ಕ್ರಿಯಾ ಯೋಜನೆಯನ್ವಯ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರು ಮಾಹಿತಿಯನ್ನು ಜಿಲ್ಲಾಧಿಕಾರಿಗಳು, ಆಯುಕ್ತರು ಮಹಾನಗರ ಪಾಲಿಕೆ, ಬಿಬಿಎಂಪಿ ಆಯುಕ್ತರು/ ವಲಯ ಜಂಟಿ ಆಯುಕ್ತರು ಇವರುಗಳಿಗೆ ನೀಡತಕ್ಕದ್ದು.
3. ಕಾಮಗಾರಿಗಳ ಅನುಷ್ಠಾನವನ್ನು ಯಾವ ಏಜೆನ್ಸಿ ವತಿಯಿಂದ ಕೈಗೊಳ್ಳಬೇಕು ಎಂಬುದನ್ನು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳು ನಿರ್ಧರಿಸತಕ್ಕದ್ದು.
4. ಕಾಮಗಾರಿಗಳ ಅಂದಾಜುಪಟ್ಟಿಗಳನ್ನು ಸಿದ್ಧಪಡಿಸಿ, ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರ ಮುಖಾಂತರ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿ ಆರ್ಥಿಕವಾಗಿ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ (delegation of financial powers) ಆಡಳಿತಾತ್ಮಕ ಅನುಮೋದನೆಯನ್ನು ಪಡೆಯತಕ್ಕದ್ದು.
5. ಜಿಲ್ಲಾಧಿಕಾರಿಗಳು & ಜಿಲ್ಲಾ ಅಧಿಕಾರಿಗಳು ಕಾಮಗಾರಿ ಅನುಷ್ಠಾನಗೊಳಿಸುವ ಕಾಲಮಿತಿ (ಬಾರ್ ಚಾರ್ಟ್) ನಿಗಧಿಪಡಿಸುವುದು.
6. ಜಿಲ್ಲಾ ಮಟ್ಟದಲ್ಲಿ ಇತರೆ ಯಾವುದೇ ಯೋಜನೆಯಡಿ ಕಾಮಗಾರಿಗಳನ್ನು ಕೈಗೊಳ್ಳದೇ ಇರುವ ಬಗ್ಗೆ ಖಾತರಿಪಡಿಸಿಕೊಳ್ಳುವುದು. ಕಾಮಗಾರಿಗಳು ಪುನರಾವರ್ತನೆಯಾಗದಂತೆ (Duplication) ನೋಡಿಕೊಳ್ಳತಕ್ಕದ್ದು.
7. ಕ್ರಿಯಾ ಯೋಜನೆ ಮತ್ತು ಅನುದಾನ ಬಿಡುಗಡೆಗೆ ತಕ್ಕಂತೆ ಅಂದಾಜುಪಟ್ಟಿ ತಯಾರಿಸಿ ಸಲ್ಲಿಸುವುದು.

......6

ಈ ಯೋಜನೆಯನ್ನು ಅನುಷ್ಠಾನಗೊಳಿಸಲು 2020-21ನೇ ಸಾಲಿನ ಲೆಕ್ಕಶೀರ್ಷಿಕೆ 4225-04-102-1-01(386) ರಡಿಯಲ್ಲಿ ರಾಜ್ಯದ ಒಟ್ಟು 11 ಕಾರ್ಪೋರೇಷನ್‌ಗಳಲ್ಲಿ ಅಲ್ಪಸಂಖ್ಯಾತರ ಸ್ಲಂ/ಕಾಲೋನಿ ಅಭಿವೃದ್ಧಿ ಯೋಜನೆಯಡಿ ಒದಗಿಸಲಾದ ಅನುದಾನದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 188 ವೆಚ್ಚ-3/2020 ದಿನಾಂಕ: 25-11-2020ರಲ್ಲಿ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 16 ಐಎಂಎಂ 2020 ದಿನಾಂಕ:26-06-2020ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಸುಮಿತ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ

ಗೆ,

1. ಮಹಾಲೇಖಪಾಲರು(ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ವೆಚ್ಚ) ವಿಧಾನ ಸೌಧ, ಬೆಂಗಳೂರು.
5. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವಿ.ವಿ.ಗೋಪುರ, ಬೆಂಗಳೂರು
6. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ.
7. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 & 9), ವಿಧಾನಸೌಧ, ಬೆಂಗಳೂರು.
9. ಆಂತರಿಕ ಆರ್ಥಿಕ ಸಲಹೆಗಾರರು, ಅಲ್ಪಸಂಖ್ಯಾತರ ಕಲ್ಯಾಣ ಅಲ್ಪಸಂಖ್ಯಾತರ ಕಲ್ಯಾಣ, ವಿಕಾಸ ಸೌಧ, ಬೆಂಗಳೂರು.
10. ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.(ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಮುಖಾಂತರ)
11. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಖಜಾನಾಧಿಕಾರಿಗಳು.
12. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು
13. ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು
14. ಸರ್ಕಾರದ ಉಪ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ಇವರ ಆಪ್ತ ಸಹಾಯಕರು ವಿಕಾಸ ಸೌಧ, ಬೆಂಗಳೂರು
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

8. ಅನುಮೋದನೆಗೊಂಡ ಕಾಮಗಾರಿಗಳನ್ನು ಪರಿಣಾಮಕಾರಿಯಾಗಿ ಚಾಲಗೆ ಬರುವಂತೆ ನೋಡಿಕೊಳ್ಳುವುದು.
9. ಕಾಲ-ಕಾಲಕ್ಕೆ ಪ್ರಗತಿಯ ವರದಿಯನ್ನು ನಿರ್ದೇಶನಾಲಯಕ್ಕೆ ಸಲ್ಲಿಸುವುದು.
10. ಕಾಮಗಾರಿಯು ಪೂರ್ಣಗೊಂಡ ನಂತರ ಛಾಯಾಚಿತ್ರದೊಂದಿಗೆ ಹಣ ಬಳಕೆ ಪ್ರಮಾಣ ಪತ್ರವನ್ನು ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.

ಪ್ರಸ್ತಾವನೆ ಸಲ್ಲಿಸುವ ಪೂರ್ವದಲ್ಲಿ ಅನುಸರಿಸಬೇಕಾದ ಕ್ರಮಗಳು:

ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರುಗಳು ಈ ಕೆಳಕಂಡ ಕ್ರಮಗಳನ್ನು ನಿರ್ವಹಿಸಬೇಕಾಗಿರುತ್ತದೆ.

- ನಗರ ಪ್ರದೇಶಕ್ಕೆ ಸಂಬಂಧಿಸಿದಂತೆ, ಕೊಳಚೆ ನಿರ್ಮೂಲನಾ ಮಂಡಳಿಯಿಂದ ಅಧಿಸೂಚಿತವಲ್ಲದ ಮಾಡಿರುವ ಕೊಳಚೆ ಪ್ರದೇಶಗಳ ಪಟ್ಟಿಯನ್ನು ಪಡೆಯತಕ್ಕದ್ದು.
- ಕೊಳಚೆ ನಿರ್ಮೂಲನಾ ಮಂಡಳಿಯಿಂದ ಗುರುತಿಸದಿರುವ ಅಧಿಸೂಚಿತವಲ್ಲದ ಪ್ರದೇಶಗಳಲ್ಲಿ ಶೇ.50 ರಷ್ಟು ಅಲ್ಪಸಂಖ್ಯಾತರು ವಾಸ ಮಾಡುತ್ತಿದ್ದಲ್ಲಿ, ಅಂತಹ ಪ್ರದೇಶಗಳನ್ನು ಗುರುತಿಸಿ ಪಟ್ಟಿ ಮಾಡತಕ್ಕದ್ದು.
- ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರು ಈ ಯೋಜನೆಯ ಅನುಷ್ಠಾನ/ ಕ್ರಿಯಾ ಯೋಜನೆ ತಯಾರಿಸುವಾಗ ಸದರಿ ಯೋಜನೆಯಲ್ಲಿ ಕೈಗೆತ್ತಿಕೊಳ್ಳುತ್ತಿರುವ ಕಾಮಗಾರಿಯನ್ನು ಕರ್ನಾಟಕ ಸರ್ಕಾರದ ಇತರೆ ಯೋಜನೆಯಲ್ಲಿ ಸೌಲಭ್ಯ ಪಡೆದಿರುವುದಿಲ್ಲವೆಂದು ದೃಢೀಕರಿಸತಕ್ಕದ್ದು.
- ನಗರ ಪ್ರದೇಶಗಳಲ್ಲಿ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಂದ ಕಾಮಗಾರಿ ಮನರಾವರ್ತನೆಯಾಗಿರುವುದಿಲ್ಲವೆಂದು ದೃಢೀಕರಣ ಪಡೆಯುವುದು.
- ಮೇಲ್ಕಂಡಂತೆ ಗುರುತಿಸಲಾದ ಪ್ರದೇಶ/ ಕಾಲೋನಿಗಳಲ್ಲಿ ಕೈಗೊಳ್ಳಲಾಗುವ ಕಾಮಗಾರಿಗಳ ಬಗ್ಗೆ ಕ್ರೋಢೀಕೃತ ಪಟ್ಟಿಯನ್ನು ಸಿದ್ಧಪಡಿಸಿ, ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಂದ ಆಡಳಿತಾತ್ಮಕ ಅನುಮೋದನೆಯನ್ನು ಪಡೆಯಬೇಕು.
- ಮೇಲ್ಕಂಡಂತೆ ಆಡಳಿತಾತ್ಮಕ ಅನುಮೋದನೆ ಪಡೆಯುವ ಸಂದರ್ಭದಲ್ಲಿ ಪಡೆಯಲಾದ ದೃಢೀಕೃತ ಪಟ್ಟಿಯನ್ನು ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ರವರಿಗೆ ಸಲ್ಲಿಸತಕ್ಕದ್ದು.

ಪ್ರಸ್ತಾವನೆ ತಯಾರಿಸಿ ಅಂಗೀಕರಿಸುವುದು & ಅನುಷ್ಠಾನಗೊಳಿಸುವುದು:

- ಅದರನ್ವಯ ನಗರದ ಅಧಿಸೂಚಿತವಲ್ಲದ ಪ್ರದೇಶಗಳ ಕಾಮಗಾರಿ ವಿವರ ಮತ್ತು ಅವಶ್ಯಕವಿರುವ ಅನುದಾನದ ವಿವರಗಳನ್ನು ಒಳಗೊಂಡಂತೆ ಪಟ್ಟಿಯನ್ನು ಸಿದ್ಧಪಡಿಸುವುದು.

......7

- ಮೇಲ್ಕಂಡಂತೆ ಗುರುತಿಸಲಾದ ನಗರದ ಅಧಿಸೂಚಿತವಲ್ಲದ ಪ್ರದೇಶ ಕೈಗೊಳ್ಳಬೇಕಾಗಿರುವ ಕಾಮಗಾರಿಗಳ ಅಂದಾಜು ಮೊತ್ತದ ವಿವರಗಳನ್ನು ಸರ್ಕಾರಿ/ ಅರೆ ಸರ್ಕಾರಿ ಏಜೆನ್ಸಿಗಳ ಅಭಿಯಂತರರಿಂದ ತಯಾರಿಸುವುದು.
- ಪ್ರಸ್ತಾವನೆಯೊಂದಿಗೆ ಕೈಗೊಳ್ಳಲು ಉದ್ದೇಶಿಸಿರುವ ಕಾಮಗಾರಿಗಳ ಪ್ರಸ್ತುತ ಚಿತ್ರಣವನ್ನು ಬಿಂಬಿಸುವ ಕನಿಷ್ಠ 05 ಫೋಟೋಗಳನ್ನು ನೀಡುವುದು.
- ಮೇಲ್ಕಂಡಂತೆ ಸ್ವೀಕರಿಸಲಾದ ಪ್ರಸ್ತಾವನೆಯು ಅಗತ್ಯ ದಾಖಲಾತಿಗಳೊಂದಿಗೆ ಹಾಗೂ ಈಗಾಗಲೇ ನೀಡಲಾಗಿರುವ ನಿರ್ದೇಶನಗಳನ್ವಯ ಇರುವ ಬಗ್ಗೆ ಖಚಿತಪಡಿಸಕೊಳ್ಳತಕ್ಕದ್ದು.
- ಪ್ರಸ್ತಾವನೆಯನ್ನು ಸಂಬಂಧಪಟ್ಟ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು ನಿಯಮಾನುಸಾರ ಅನುಮೋದಿಸುವುದು.
- ಪ್ರಸ್ತಾವನೆಯನ್ನು ಪರಿಶೀಲಿಸಿ, ಮಂಜೂರಾತಿ ನೀಡಲಾದ ಕಾಮಗಾರಿಗಳನ್ನು ಯಾವ ನಿರ್ಮಾಣ ಏಜೆನ್ಸಿ ವತಿಯಿಂದ ಕೈಗೊಳ್ಳಬೇಕು ಎಂಬುದನ್ನು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳು ನಿರ್ಧರಿಸತತಕ್ಕದ್ದು.
- ಕಾಮಗಾರಿಗಳ ಅಂದಾಜುಪಟ್ಟಿಗಳನ್ನು ಸಿದ್ಧಪಡಿಸಿ, ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರ ಮುಖಾಂತರ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿ delegation of financial powers ನಲ್ಲಿ ತಿಳಿಸಿರುವಂತೆ ಆಡಳಿತಾತ್ಮಕ ಅನುಮೋದನೆಯನ್ನು ಪಡೆಯತಕ್ಕದ್ದು.
- ನಿಗಧಿತ ಅವಧಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ ಸಂಬಂಧಪಟ್ಟ ನಿರ್ಮಾಣ ಏಜೆನ್ಸಿಯಿಂದ ದೃಢೀಕೃತ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.
- ಯೋಜನೆಗೆ ಸಂಬಂಧಿಸಿದ ಅನುದಾನ ಮತ್ತು ಕಾಮಗಾರಿಯ ವಿವರವನ್ನು ಅನುಷ್ಠಾನ ಏಜೆನ್ಸಿ ಫಲಕಗಳನ್ನು ಪ್ರದರ್ಶಿಸುವುದು.
- ಕಾಮಗಾರಿಗಳ ಗುಣಮಟ್ಟದ ಬಗ್ಗೆ 3ನೇ ವ್ಯಕ್ತಿಯ ತಪಾಸಣೆಯನ್ನು ಕೈಗೊಳ್ಳತಕ್ಕದ್ದು

M. Sumithra

(ಎಂ.ಸುಮಿತ್ರ)

ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ

(6) (6)



# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯವನ್ನು ಒದಗಿಸಲು **(ಕಾಲೋನಿ ಅಭಿವೃದ್ಧಿ)** ಕ್ರಿಯಾ ಯೋಜನೆಯನ್ನು ರೂಪಿಸಿ, ಅನುಷ್ಠಾನಗೊಳಿಸಲು ಮಂಜೂರಾತಿ ನೀಡುವ ಕುರಿತು.

**ಓದಲಾಗಿದೆ:** 1. 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-222.

2. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 169 ಎಂಡಿಎಸ್ 2017 ದಿನಾಂಕ: 06.04.2017

3. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 151 ಎಂಡಿಎಸ್ 2016 ದಿನಾಂಕ: 04.07.2017.

4. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ಇವರ ಏಕಕಡತದ ಪ್ರಸ್ತಾವನೆ ಸಂಖ್ಯೆ: ಅಸಂನಿ/ಮೂ.ಸೌ. ಕ್ರಿಯೋ/ಸಿಆರ್-177/2016-17 ದಿನಾಂಕ: 31.03.2017.

*~*~*~*~*

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು 2017-18 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-222ರಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯವನ್ನು ಒದಗಿಸಲು ರೂ.800.00ಕೋಟಿಗಳ ಕ್ರಿಯಾ ಯೋಜನೆಯನ್ನು ರೂಪಿಸಿ, ಅನುಷ್ಠಾನಗೊಳಿಸಲಾಗುವುದೆಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರಿ ಆದೇಶದಲ್ಲಿ 2016-17ನೇ ಸಾಲಿನಲ್ಲಿ ಚಾಲ್ತಿಯಲ್ಲಿರುವ ಈ ಯೋಜನೆಯನ್ನು 2017-18ನೇ ಸಾಲಿಗೆ ಮುಂದುವರೆಸಿ ಆದೇಶಿಸಿದೆ. ಈ ಯೋಜನೆಗೆ ಪ್ರಸಕ್ತ ಆರ್ಥಿಕ ವರ್ಷ 2017-18ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ:4225-03-277-2-10(386) ರಡಿ ರೂ.500.00 ಕೋಟಿ ಅನುದಾನ ಒದಗಿಸಲಾಗಿದ್ದು, ಇದರಲ್ಲಿ ಆಯವ್ಯಯ ಭಾಷಣದ ಕಾರ್ಯಕ್ರಮಕ್ಕೆ ರೂ.800.00ಕೋಟಿಗಳ ಕ್ರಿಯಾ ಯೋಜನೆ ತಯಾರಿಸಿ ಅನುಮೋದಿಸಲು ಇದಕ್ಕಾಗಿ ರೂ.400.00ಕೋಟಿಗಳನ್ನು ಮೀಸಲಿರಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಸರ್ಕಾರಿ ಆದೇಶದಲ್ಲಿ ಅಲ್ಪಸಂಖ್ಯಾತರು ರಾಜ್ಯದ ಎಲ್ಲಾ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ, ನಗರವ್ಯಾಪ್ತಿಯಲ್ಲಿನ Notified & Non Notified ಕೊಳಚೆ ಪ್ರದೇಶದಲ್ಲಿ ವಾಸಿಸುತ್ತಿದ್ದು, ಪ್ರಮುಖ ಮೂಲ ಸೌಕರ್ಯಗಳಿಂದ ವಂಚಿತರಾಗಿರುವ ಸ್ಥಳಗಳಲ್ಲಿ ಇದೊಂದು ವಿಶೇಷ ಯೋಜನೆಯಡಿ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡು ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

1. ರಸ್ತೆ ಮತ್ತು ಚರಂಡಿ/ ಒಳಚರಂಡಿ ನಿರ್ಮಾಣ.
2. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು.
3. ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು.
4. ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆಗೆ ಸ್ಥಳೀಯ ಸಂಸ್ಥೆಯ ಸುಪರ್ದಿಗೆ ನೀಡುವುದು)

....2

ಈ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಆರ್ಥಿಕ ಇಲಾಖೆಯು ಸೂಚಿಸಿರುವಂತೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ರೂ.800.00ಕೋಟಿಗಳ ಅನುದಾನಕ್ಕೆ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ, ಸರ್ಕಾರದ ಅನುಮೋದನೆಯನ್ನು ಪಡೆಯಲು ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರು ಏಕಕಡತ ಪದ್ಧತಿಯನ್ವಯ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಮುಂದುವರೆದು 2017-18ನೇ ಸಾಲಿನಲ್ಲಿ ಈ ಯೋಜನೆಗೆ ರೂ.400.00ಕೋಟಿಗಳ ಅನುದಾನವನ್ನು ಒದಗಿಸಲಾಗಿದೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:MWD 192 MDS 2017, ಬೆಂಗಳೂರು, ದಿನಾಂಕ:21-07-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸನ್ಮಾನ್ಯ ಮುಖ್ಯಮಂತ್ರಿಯವರು 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-222 ರಲ್ಲಿ ಘೋಷಿಸಿರುವಂತೆ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು (ಕಾಲೋನಿ ಅಭಿವೃದ್ಧಿ) ರೂ.800.00ಕೋಟಿಗಳ ಅನುದಾನಕ್ಕೆ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಕೆಳಕಂಡಂತೆ ಅನುದಾನವನ್ನು ಮೀಸಲಿರಿಸಿ ಈ ಆದೇಶದೊಂದಿಗೆ ಲಗತ್ತಿಸಿರುವ ಮಾರ್ಗಸೂಚಿಗಳನ್ವಯ ಯೋಜನೆಯನ್ನು ಕೆಳಕಂಡ ಷರತ್ತುಗಳೊಂದಿಗೆ ಅನುಷ್ಠಾನಗೊಳಿಸಲು ಹಾಗೂ ಕಾಮಗಾರಿಯ ಗುಣಮಟ್ಟವನ್ನು ಖಾತರಿಪಡಿಸಿಕೊಳ್ಳಲು ಅಲ್ಪಸಂಖ್ಯಾತ ನಿರ್ದೇಶನಾಲಯದಲ್ಲಿ ಒಂದು ಪ್ರಾಜೆಕ್ಟ್ ಮಾನಿಟರಿಂಗ್ ಘಟಕವನ್ನು ಸ್ಥಾಪಿಸಿ, ಈ ಘಟಕದಲ್ಲಿ ಒಬ್ಬ ಟೀಂ ಲೀಡರ್, 04 ಪ್ರಾಜೆಕ್ಟ್ ಮ್ಯಾನೇಜಮೆಂಟ್ ಕನ್ಸಲ್‌ಟೆಂಟ್‌ಗಳನ್ನು ಹಾಗೂ 08 ಮಂದಿ ಅನುಭವಿ ಇಂಜಿನಿಯರ್‌ಗಳ ಹುದ್ದೆಗಳನ್ನು ಒಳಗೊಂಡಿರತಕ್ಕದ್ದು ಈ ಹುದ್ದೆಗಳನ್ನು ಬಾಹ್ಯ ಮೂಲದ ಆಧಾರದ ಮೇಲೆ ಪಡೆಯಲು ಅನುಮೋದನೆ ನೀಡಿ ಆದೇಶಿಸಿದೆ.

1. ರಸ್ತೆ ಮತ್ತು ಚರಂಡಿ/ ಒಳಚರಂಡಿ ನಿರ್ಮಾಣ.
2. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು.
3. ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು.
4. ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆಗೆ ಸ್ಥಳೀಯ ಸಂಸ್ಥೆಯ ಸುಪರ್ದಿಗೆ ನೀಡುವುದು)

(ರೂ.ಕೋಟಿಗಳಲ್ಲಿ)

| ಕ್ರ.ಸಂ | ಯೋಜನೆ | ಮೊತ್ತ |
|---|---|---|
| 1 | 2016-17ನೇ ಸಾಲಿನ ಕಾಮಗಾರಿಗಳಿಗೆ ಬಿಡುಗಡೆ ಮಾಡಬೇಕಾದ ಬಾಕಿ ಅನುದಾನ | 50.00 |
| 2 | ಉಳಿದ ರೂ.750.00ಕೋಟಿಗಳಿಗೆ ರಾಜ್ಯ ಸಮಿತಿಯ ಮಟ್ಟದ ಮೂಲಕ ಕ್ರಿಯಾ ಯೋಜನೆ ರೂಪಿಸುವುದು | 750.00 |
| 3 | ಐ.ಸಿ.ಟಿ. ಕಾರ್ಯಕ್ರಮಕ್ಕೆ ಅನುದಾನದ ಒಟ್ಟು ಮೊತ್ತದಲ್ಲಿ ಶೇ.1%ರಷ್ಟು ಬಳಸುವುದು. | |
| | ಒಟ್ಟು | 800.00 |

....3

<u>**ಷರತ್ತುಗಳು:-**</u>

1. ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಭೌಧ ಸಿಖ್ ಮತ್ತು ಪಾರ್ಸಿ ಸಮುದಾಯದವರು ಶೇ.50%ರಷ್ಟು ವಾಸವಾಗಿರಬೇಕು.
2. ನಗರ ವ್ಯಾಪ್ತಿಯಲ್ಲಿನ Notified & Non-notified ಕೊಳಚೆ ಪ್ರದೇಶಗಳು ಹಾಗೂ ಗ್ರಾಮೀಣ ಪ್ರದೇಶದ ಅಲ್ಪಸಂಖ್ಯಾತರ ಸಮುದಾಯದ ಜನರು ವಾಸವಾಗಿರುವ ಕಾಲೋನಿ, ಕೇರಿ, ಮೊಹಲ್ಲಾ, ಮತ್ತು ಇತರೆ ಕೊಳಚೆ ಪ್ರದೇಶಗಳಿಗೆ ಆಧ್ಯತೆಯನ್ನು ನೀಡಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳತಕ್ಕದ್ದು.
3. ಪೌರಡಳಿತ ನಿರ್ದೇಶನಾಲಯ ಪಂಚಾಯತ್ ರಾಜ್ ಇಲಾಖೆ, ಕೊಳಗೇರಿ ಅಭಿವೃದ್ಧಿ ಮಂಡಳಿ ಹಾಗೂ ಹೈದರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗಳು ಶೇ.20ರಷ್ಟು ವಂತಿಕೆಯಾಗಿ ಪಾವತಿಸಿದಲ್ಲಿ ಮೇಲಿನ ಕಾಮಗಾರಿಗಳನ್ನು ತ್ವರಿತವಾಗಿ ಮತ್ತು ಪ್ರಥಮ ಆದ್ಯತೆಯ ಮೇಲೆ ಕೈಗೊಳ್ಳತಕ್ಕದ್ದು.
4. ಆದೇಶದಲ್ಲಿನ ಕಾಮಗಾರಿಗಳನ್ನು ಮೇಲ್ವಿಚಾರಣೆಗಾಗಿ ಘಟಕ ಸ್ಥಾಪನೆಗೆ ಆರ್ಥಿಕ ಇಲಾಖೆಯು ಸಹಮತಿಸಿರುವಂತೆ ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಲಾಗುವ ಇಂಜಿನಿಯರ್‌ಗಳನ್ನು ಬಿ.ಬಿ.ಎಂ.ಪಿ. ವ್ಯಾಪ್ತಿಯಿಂದ ಹೊರತುಪಡಿಸಿ 04 ಪ್ರಾದೇಶಿಕ ವಿಭಾಗಗಳಿಗೆ ನಿಯೋಜಿಸತಕ್ಕದ್ದು.
5. ನಗರಾಭಿವೃದ್ಧಿ ಮತ್ತು ಗ್ರಾಮೀಣ ಅಭಿವೃದ್ಧಿ ಇಲಾಖೆ, ಸ್ಥಳೀಯ ಸಂಸ್ಥೆಗಳು, ಕೊಳಗೇರಿ ಅಭಿವೃದ್ಧಿ ಮಂಡಳಿ, ಹೈದರಾಬಾದ್-ಕರ್ನಾಟಕ ಅಭಿವೃದ್ಧಿ ಮಂಡಳಿ ಹಾಗೂ ಇತರೆ ಸರ್ಕಾರಿ ಇಲಾಖೆಗಳ ತೆಗೆದುಕೊಂಡಿರುವ ಕಾಮಗಾರಿಯನ್ನು ಪುನರಾವರ್ತನೆಯಾಗದಂತೆ ನೋಡಿಕೊಳ್ಳತಕ್ಕದ್ದು.
6. ಅಲ್ಪಸಂಖ್ಯಾತರ ಸಮುದಾಯದ ಜನರು ವಾಸವಾಗಿರುವ ಕಾಲೋನಿ, ಕೇರಿ ಮತ್ತು ಮೊಹಲ್ಲಾಗಳಲ್ಲಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಕಾಮಗಾರಿಗಳನ್ನು ಪರಿಶೀಲಿಸಿ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಂದ ದೃಢೀಕರಿಸಿರಬೇಕು.
7. ಅತೀ ಹೆಚ್ಚು ಅಲ್ಪಸಂಖ್ಯಾತ ಜನಾಂಗದವರು ವಾಸಿಸುವ ಜಿಲ್ಲೆ ಮತ್ತು ತಾಲ್ಲೂಕುಗಳಲ್ಲಿ ಮೂಲಭೂತ ಸೌಕರ್ಯಗಳಿಗಾಗಿ ತಯಾರಿಸುವ ಅಂದಾಜುಪಟ್ಟಿಯನ್ವಯ ಅನುಗುಣವಾಗಿ ಅನುದಾನವನ್ನು ನಿಗದಿಪಡಿಸತಕ್ಕದ್ದು.
8. ವಿಧಾನಸಭಾ ಕ್ಷೇತ್ರವಾರು/ಲೋಕಸಭಾ ಕ್ಷೇತ್ರವಾರು ಸಮಾನಾಂತರವಾಗಿ ಅನುದಾನ ನಿಗದಿಪಡಿಸತಕ್ಕದ್ದಲ್ಲ.

....4

9. ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ/ ರವರು ಈ ಯೋಜನೆಯ ಕ್ರಿಯಾ ಯೋಜನೆ ತಯಾರಿಸುವಾಗ ಸದರಿ ಯೋಜನೆಯಲ್ಲಿ ಕೈಗೊಳ್ಳುತ್ತಿರುವ ಕಾಮಗಾರಿಯನ್ನು ಕರ್ನಾಟಕ ಸರ್ಕಾರದ ಇತರೆ ಯೋಜನೆಯಲ್ಲಿ ಸೌಲಭ್ಯ ಪಡೆದಿರುವುದಿಲ್ಲವೆಂದು ದೃಢೀಕರಿಸತಕ್ಕದ್ದು.

10. ಐ.ಸಿ.ಟಿ ಕಾರ್ಯಕ್ರಮ ರೂಪಿಸಿ ಯೋಜನೆಯ ಪ್ರಚಾರ, ಜಾಹೀರಾತು, ಪ್ರಕಟಣೆಗಳನ್ನು ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರು ನೀಡುವುದು.

11. ಈ ಕಾಮಗಾರಿಗಳ ಗುಣಮಟ್ಟದ ಬಗ್ಗೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು, ಆಗಿಂದಾಗ್ಗೆ ತಪಾಸಣೆ ಕೈಗೊಂಡು ಕಾಮಗಾರಿಯ ಗುಣಮಟ್ಟ ತೃಪ್ತಿಕರವಾಗಿರುವುದನ್ನು ಖಚಿತ ಪಡಿಸಿಕೊಂಡ ನಂತರ ಅನುದಾನ ಬಿಡುಗಡೆ ಮಾಡತಕ್ಕದ್ದು.

ಈ ಯೋಜನೆಯನ್ನು ಅನುಷ್ಠಾನಗೊಳಿಸಲು 2017-18ನೇ ಸಾಲಿನ ಲೆಕ್ಕಶೀರ್ಷಿಕೆ 4225-03-277-2-10ರಲ್ಲಿ ಒದಗಿಸಲಾಗಿರುವ ಅನುದಾನದಲ್ಲಿಯೇ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೇಆಇ 241 ವೆಚ್ಚ-3/2017 ದಿನಾಂಕ:15-07-2017 ರಲ್ಲಿ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 55 ಐಎಂಎಂ 2017 ದಿ:25-04-2017ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಅಬ್ರಾರ್ ಭಾಷ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ.

ಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ), ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು.
6. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಅಲ್ಪಸಂಖ್ಯಾತರ ಕಲ್ಯಾಣ ಮತ್ತು ಔಕಾಫ್ ಸಚಿವರು ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ವಿ.ವಿ.ಗೋಪುರ, 20ನೇ ಮಹಡಿ, ಬೆಂಗಳೂರು.
8. ನಿರ್ದೇಶಕರು, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

**ಸರ್ಕಾರದ ಆದೇಶ ಸಂಖ್ಯೆ: MWD 192 MDS 2017, ದಿನಾಂಕ:21-07-2017ಕ್ಕೆ**

**ಮಾರ್ಗಸೂಚಿಗಳು**

ಕ್ರಿಯಾ ಯೋಜನೆಯನ್ನು ರೂಪಿಸಲು ಸ್ಥಾಪಿಸಲಾದ ರಾಜ್ಯಮಟ್ಟದ ಸಮಿತಿ.

| ಕ್ರ.ಸಂ | ಪದನಾಮ | |
|---|---|---|
| 1 | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತ ವಕ್ಫ್ ಸಚಿವರು | ಅಧ್ಯಕ್ಷರು |
| 2 | ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು | ಸದಸ್ಯರು |
| 3 | ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು | ಸದಸ್ಯರು |
| 4 | ನಿರ್ದೇಶಕರು, ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು. | ಸದಸ್ಯರು |
| 5 | ಆಯುಕ್ತರು, ಕೊಳಗೇರಿ ಅಭಿವೃದ್ಧಿ ಮಂಡಳಿ, ಬೆಂಗಳೂರು | ಸದಸ್ಯರು |
| 6 | ಹೈದರಾಬಾದ್-ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಪ್ರತಿನಿಧಿ | ಸದಸ್ಯರು |
| 7 | ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು | ಸಂಚಾಲಕರು/ಸದಸ್ಯ ಕಾರ್ಯದರ್ಶಿ |

**ರಾಜ್ಯಮಟ್ಟದ ಸಮಿತಿಯ ಪ್ರಕಾರ್ಯಗಳು**

ಎ) ಯೋಜನೆಗೆ ಸಂಬಂಧಿಸಿದ ಕಾರ್ಯ ನೀತಿ ರೂಪಿಸುವುದು

ಬಿ) ಸಂಬಂಧಪಟ್ಟ ಇಲಾಖೆಗಳು ಸೂಕ್ತ ಯೋಜನೆಗಳನ್ನು ರೂಪಿಸಲು ಹಾಗೂ ಸದರಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಸೂಕ್ತ ಸಲಹೆ/ಸೂಚನೆಗಳನ್ನು ನೀಡುವುದು.

ಸಿ) ಈ ಯೋಜನೆಗೆ ಒದಗಿಸಲಾಗಿರುವ ಅನುದಾನವನ್ನು ವಿವಿಧ ಕಾರ್ಯಕ್ರಮ/ಕಾಮಗಾರಿಗಳಿಗೆ ಹಂಚಿಕೆ ಮಾಡಿ ಈ ಅನುದಾನಕ್ಕೆ ಕ್ರಿಯಾ ಯೋಜನೆಯನ್ನು ಅನುಮೋದಿಸುವುದು.

ಡಿ) ಈ ಯೋಜನೆಯಡಿಯಲ್ಲಿ ಸಿದ್ಧಪಡಿಸಲಾಗಿರುವ ವಾರ್ಷಿಕ ಕ್ರಿಯಾ ಯೋಜನೆಯ ಪ್ರಸ್ತಾವನೆಗಳನ್ನು ಅನುಮೋದಿಸುವುದು ಹಾಗೂ

ಇ) ಗೊತ್ತುಪಡಿಸಬಹುದಾದಂಥ ಇತರ ಪ್ರಕಾರ್ಯಗಳನ್ನು ನಿರ್ವಹಿಸುವುದು.

**ರಾಜ್ಯ ಮಟ್ಟದ ಅನುಷ್ಠಾನ ಅಧಿಕಾರಿ:** ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ

**ಅನುಷ್ಠಾನ ಅಧಿಕಾರಿಯ ಪ್ರಕಾರ್ಯಗಳು**

ಸಂಬಂಧಪಟ್ಟ ಇಲಾಖೆಯ ಸಹಯೋಗದೊಂದಿಗೆ ಅನುಷ್ಠಾನ ಅಧಿಕಾರಿಯು ಈ ಮುಂದಿನ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು.

1). ರಾಜ್ಯ ಮಟ್ಟದ ಮತ್ತು ಜಿಲ್ಲಾ ಮಟ್ಟದ ಯೋಜನೆಯನ್ನು ಸಿದ್ಧಪಡಿಸಲು ಇಲಾಖೆಗಳೊಂದಿಗೆ ಸಮನ್ವಯ ಸಾಧಿಸುವುದು.

2). ಅಡಚಣೆಗಳನ್ನು ಗುರುತಿಸುವುದು ಹಾಗೂ ನಿವಾರಿಸಲು ಕ್ರಮವಹಿಸುವುದು.

3) ವೆಚ್ಚದಲ್ಲಿ ಪಾರದರ್ಶಕತೆಯನ್ನು ಕಾಪಾಡುವುದು; ಗೊತ್ತುಪಡಿಸಬಹುದಾದಂತ ಯೋಜನಾವಾರು, ಜಿಲ್ಲಾವಾರು, ಗ್ರಾಮವ್ವಾರು ವಿವರಗಳನ್ನು ನಿರ್ವಹಿಸುವುದು:

4) ಅವಶ್ಯಕತೆ ಇರುವ ಪ್ರದೇಶಗಳಲ್ಲಿ ಪ್ರಾಜೆಕ್ಟ್ ಕನ್ಸಲ್‌ಟೆಂಟ್ (Project Consultant) ಗಳನ್ನ ನೇಮಿಸಿ ಯೋಜನೆ ಅನುಷ್ಠಾನಗೊಳಿಸುವುದು.

೫) ನಿರ್ದೇಶಕರು ಅನುಮೋದಿಸಲ್ಪಟ್ಟ ಅನುದಾನವನ್ನು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡುವುದು. ಜಿಲ್ಲಾ ಅಧಿಕಾರಿಗಳು ಬಿಡುಗಡೆಯಾದ ಅನುದಾನವನ್ನು ವ್ಯಾಪಗತವಾಗದಂತೆ ಪಿ.ಡಿ ಖಾತೆಯಲ್ಲಿ ಜಮ ಮಾಡತಕ್ಕದ್ದು.

**ಕ್ರಿಯಾ ಯೋಜನೆಯನ್ನು ರೂಪಿಸಲು ಸ್ಥಾಪಿಸಲಾದ ಜಿಲ್ಲಾಮಟ್ಟದ ಸಮಿತಿ. (District Level) Committee):**

| | | |
|---|---|---|
| 1) ಜಿಲ್ಲಾಧಿಕಾರಿಗಳು | : | ಅಧ್ಯಕ್ಷರು |
| 2) ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ | : | ಸದಸ್ಯರು |
| 3) ಜಿಲ್ಲಾ ಆರೋಗ್ಯಾಧಿಕಾರಿ | : | ಸದಸ್ಯರು |
| 4) ಕಾರ್ಯಪಾಲಕ ಇಂಜಿನಿಯರ್, ಲೋಕಪಯೋಗಿ ಇಲಾಖೆ (ಪಿ.ಡಬ್ಲ್ಯೂ.ಡಿ) | : | ಸದಸ್ಯರು |
| ೫) ಸಂಬಂಧಪಟ್ಟ ಏಜೆನ್ಸಿ | : | ಸದಸ್ಯರು |
| 6) ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ | : | ಸಂಚಾಲಕರು/ಸದಸ್ಯ ಕಾರ್ಯದರ್ಶಿ |
| 7) ಯೋಜನಾ ನಿರ್ದೇಶಕರು, ಡಿ.ಯು.ಡಿ.ಸಿ ಜಿಲ್ಲಾಧಿಕಾರಿಗಳ ಕಛೇರಿ | : | ಸಂಚಾಲಕರು ಮತ್ತು ಸಂಯೋಜಕರು |

**ಜಿಲ್ಲಾಮಟ್ಟದ ಸಮಿತಿಯ ಪ್ರಕಾರ್ಯಗಳು**

1. ಈ ಜಿಲ್ಲಾ ಮಟ್ಟದ ಸಮಿತಿಯು ಸದರಿ ಸರ್ಕಾರದ ಆದೇಶ, ಹಾಗೂ ಮಾರ್ಗಸೂಚಿಗಳನ್ವಯ ಯೋಜನೆಗಳನ್ನು ಅನುಷ್ಠಾನಗೊಳಿಸುವುದು.
2. ಕ್ರಿಯಾ ಯೋಜನೆ ಅನ್ವಯ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಮಾಹಿತಿಯನ್ನು ಜಿಲ್ಲಾಧಿಕಾರಿಗಳಿಗೆ ಸೂಚಿಸುವುದು.
3. ಸ್ಥಳೀಯ ವಿಧಾನಸಭಾ ಸದಸ್ಯರು/ವಿಧಾನ ಪರಿಷತ್ ಸದಸ್ಯರು ಸೂಚಿಸುವ ಕಾಮಗಾರಿಗಳನ್ನು ಪರಿಶೀಲಿಸಿ ಅನುಮೋದಿಸಬೇಕು.
4. **ಈ ಯೋಜನೆಯಡಿಯಲ್ಲಿ ಉದ್ದೇಶಿಸಿರುವ ಕಾಮಗಾರಿಗಳನ್ನು ವಿಧಾನಸಭಾ ಸದಸ್ಯರು ಹಾಗೂ ವಿಧಾನ ಪರಿಷತ್ ಸದಸ್ಯರ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ನಿಗಧಿಪಡಿಸಿರುವ ಮಾರ್ಗಸೂಚಿಯನ್ವಯ ಅನುಷ್ಠಾನಕ್ಕೆ ತರುವುದು.**
5. ಕಾಮಗಾರಿಗಳ ಅನುಷ್ಠಾನವನ್ನು ಯಾವ ಏಜೆನ್ಸಿ ವತಿಯಿಂದ ಕೈಗೊಳ್ಳಬೇಕು ಎಂಬುದನ್ನು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳು ನಿರ್ಧರಿಸತಕ್ಕದ್ದು.
6. ಕಾಮಗಾರಿಗಳ ಅಂದಾಜು ಪಟ್ಟಿಗಳನ್ನು ಸಿದ್ಧಪಡಿಸಿ, ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರ ಮುಖಾಂತರ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿ ಆರ್ಥಿಕವಾಗಿ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ (delegation of financial powers) ಆಡಳಿತಾತ್ಮಕ ಅನುಮೋದನೆಯನ್ನು ಪಡೆಯತಕ್ಕದ್ದು.
7. ಜಿಲ್ಲಾಧಿಕಾರಿಗಳು ಕಾಮಗಾರಿ ಅನುಷ್ಠಾನಗೊಳಿಸುವ ಕಾಲಮಿತಿ (ಬಾರ್ ಚಾರ್ಟ್) ನಿಗದಿಪಡಿಸುವುದು.

....8

8. ಜಿಲ್ಲಾ ಮಟ್ಟದಲ್ಲಿ ಇತರೆ ಯಾವುದೇ ಯೋಜನೆಯಡಿ ಕಾಮಗಾರಿಗಳನ್ನು ಕೈಗೊಳ್ಳದೇ ಇರುವ ಬಗ್ಗೆ ಖಾತರಿಪಡಿಸಿಕೊಳ್ಳುವುದು. ಕಾಮಗಾರಿಗಳು ಪುನರಾವರ್ತಿತವಾಗದಂತೆ (Duplication) ನೋಡಿಕೊಳ್ಳತಕ್ಕದ್ದು.
9. ಕ್ರಿಯಾ ಯೋಜನೆ ಮತ್ತು ಅನುದಾನ ಬಿಡುಗಡೆಗೆ ತಕ್ಕಂತೆ ಅಂದಾಜು ಪಟ್ಟಿ ತಯಾರಿಸಿ ಸಲ್ಲಿಸುವುದು.
10. ಅನುಮೋದನೆಗೊಂಡ ಕಾಮಗಾರಿಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ಬರುವಂತೆ ನೋಡಿಕೊಳ್ಳುವುದು.
11. ಕಾಲದಿಂದ ಕಾಲಕ್ಕೆ ಪ್ರಗತಿಯ ವರದಿಯನ್ನು ನಿರ್ದೇಶನಾಲಯಕ್ಕೆ ಸಲ್ಲಿಸುವುದು.
12. ಕಾಮಗಾರಿಯು ಪೂರ್ಣಗೊಂಡ ನಂತರ ಛಾಯಾಚಿತ್ರದೊಂದಿಗೆ ಉಪಯೋಗಿತ ಪ್ರಮಾಣ ಪತ್ರವನ್ನು ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.
13. ಸ್ಥಳೀಯ ವಿಧಾನ ಸಭಾ ಕ್ಷೇತ್ರದ ಶಾಸಕರು/ವಿಧಾನ ಪರಿಷತ್ ಸದಸ್ಯರು ಸೂಚಿಸುವ ಈ ಸರ್ಕಾರಿ ಆದೇಶದಲ್ಲಿನ ಕಾಮಗಾರಿಗಳನ್ನು ಸ್ಥಳೀಯ ಸಂಸ್ಥೆಯವರು ಪರಿಶೀಲಿಸಿ ಅನುಮೋದಿಸಿದ ನಂತರ ಸಮಿತಿಯು ರೂ.02.00ಕೋಟಿಗಳವರೆಗೆ ಅನುಮೋದನೆ ನೀಡುವ ಅಧಿಕಾರ ಹೊಂದಿರುತ್ತವೆ.

**<u>ಪ್ರಸ್ತಾವನೆ ಸಲ್ಲಿಸುವ ಪೂರ್ವದಲ್ಲಿ ಅನುಸರಿಸಬೇಕಾದ ಕ್ರಮಗಳು.</u>**

ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರುಗಳು ಈ ಕೆಳಕಂಡ ಕ್ರಮಗಳನ್ನು ನಿರ್ವಹಿಸಬೇಕಾಗಿರುತ್ತದೆ.

- ನಗರ ಪ್ರದೇಶಕ್ಕೆ ಸಂಬಂಧಿಸಿದಂತೆ ಕೊಳಚೆ ನಿರ್ಮೂಲನಾ ಮಂಡಳಿಯಿಂದ Notified and non-notified ಮಾಡಿರುವ ಕೊಳಚೆ ಪ್ರದೇಶಗಳ ಪಟ್ಟಿಯನ್ನು ಪಡೆಯತಕ್ಕದ್ದು.
- ಕೊಳಚೆ ನಿರ್ಮೂಲನಾ ಮಂಡಳಿಯಿಂದ ಗುರುತಿಸದಿರುವ non-notified ಪ್ರದೇಶಗಳಲ್ಲಿ ಶೇ.50% ರಷ್ಟು ಅಲ್ಪಸಂಖ್ಯಾತರು ವಾಸಮಾಡುತ್ತಿದ್ದಲ್ಲಿ, ಅಂತಹ ಪ್ರದೇಶಗಳನ್ನು ಗುರುತಿಸಿ ಪಟ್ಟಿ ಮಾಡತಕ್ಕದ್ದು.
- ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಈ ಯೋಜನೆಯ ಕ್ರಿಯಾಯೋಜನೆ ತಯಾರಿಸುವಾಗ ಸದರಿ ಯೋಜನೆಯಲ್ಲಿ ಕೈಗೆತ್ತಿಕೊಳ್ಳುತ್ತಿರುವ ಕಾಮಗಾರಿಯನ್ನು ಕರ್ನಾಟಕ ಸರ್ಕಾರದ ಇತರೆ ಯೋಜನೆಯಲ್ಲಿ ಸೌಲಭ್ಯ ಪಡೆದಿರುವುದಿಲ್ಲವೆಂದು ದೃಢೀಕರಿಸತಕ್ಕದ್ದು.
- ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಂದ ಕಾಮಗಾರಿ ಪುನರಾವರ್ತನೆಯಾಗಿರುವುದಿಲ್ಲವೆಂದು ದೃಢೀಕರಣ ಪಡೆಯುವುದು.
- ಮೇಲ್ಕಂಡಂತೆ ಗುರುತಿಸಲಾದ ಪ್ರದೇಶ/ಕಾಲೋನಿಗಳಲ್ಲಿ ಕೈಗೊಳ್ಳಲಾಗುವ ಕಾಮಗಾರಿಗಳ ಬಗ್ಗೆ ಕ್ರೋಢೀಕೃತ ಪಟ್ಟಿಯನ್ನು ಸಿದ್ಧಪಡಿಸಿ, ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಂದ ಆಡಳಿತಾತ್ಮಕ ಅನುಮೋದನೆಗೆ ದೃಢೀಕರಣ ಪಡೆಯಬೇಕು.
- ಮೇಲ್ಕಂಡಂತೆ ಆಡಳಿತಾತ್ಮಕ ಅನುಮೋದನೆ ಪಡೆಯುವ ಸಂದರ್ಭದಲ್ಲಿ ಪಡೆಯಲಾದ ದೃಢೀಕೃತ ಪಟ್ಟಿಯನ್ನು ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ರವರಿಗೆ ಸಲ್ಲಿಸತಕ್ಕದ್ದು.

....9

**<u>ಪ್ರಸ್ತಾವನೆ ಸಲ್ಲಿಸುವ ಪ್ರಕ್ರಿಯೆ</u>**

- ಅದರನ್ವಯ ನಗರದ Notified and non-notified ಪ್ರದೇಶ/ಗ್ರಾಮದ ಕಾಮಗಾರಿ ವಿವರ ಮತ್ತು ಅವಶ್ಯಕವಿರುವ ಅನುದಾನದ ವಿವರಗಳನ್ನು ಒಳಗೊಂಡಂತೆ ಪಟ್ಟಿಯನ್ನು ಸಿದ್ದಪಡಿಸುವುದು.
- ಮೇಲ್ಕಂಡಂತೆ ಗುರುತಿಸಲಾದ ನಗರದ Notified and non-notified ಪ್ರದೇಶ/ಗ್ರಾಮಗಳಲ್ಲಿ ಕೈಗೊಳ್ಳಬೇಕಾಗಿರುವ ಕಾಮಗಾರಿಗಳ ಅಂದಾಜು ಮೊತ್ತದ ವಿವರಗಳನ್ನು ಸರ್ಕಾರಿ/ಅರೆ ಸರ್ಕಾರಿ ಏಜೆನ್ಸಿಗಳ ಅಭಿಯಂತರರಿಂದ ತಯಾರಿಸುವುದು.
- ಮೇಲ್ಕಂಡಂತೆ ಗುರುತಿಸಲಾದ ಕಾಮಗಾರಿಗಳನ್ನು ಇದುವರೆವಿಗೂ ಕೈಗೊಳ್ಳದಿರುವ ಬಗ್ಗೆ ಹಾಗೂ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಿಯಾ ಯೋಜನೆ ಸಿದ್ದಪಡಿಸದಿರುವ ಬಗ್ಗೆ ದೃಢೀಕರಿಸಿ, ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ರವರಿಗೆ ಪ್ರಸ್ತಾವನೆ ಸಲ್ಲಿಸತಕ್ಕದ್ದು.
- ಪ್ರಸ್ತಾವನೆಯೊಂದಿಗೆ ಕೈಗೊಳ್ಳಲು ಉದ್ದೇಶಿಸಿರುವ ಕಾಮಗಾರಿಗಳ ಪ್ರಸ್ತುತ ಚಿತ್ರಣವನ್ನು ಬಿಂಬಿಸುವ ಕನಿಷ್ಠ ೦೨ ಫೋಟೋಗಳನ್ನು ನೀಡುವುದು.

**<u>ಪ್ರಸ್ತಾವನೆಯನ್ನು ಅಂಗೀಕರಿಸುವ ಪ್ರಕ್ರಿಯೆ</u>**

- ಮೇಲ್ಕಂಡಂತೆ ಸ್ವೀಕರಿಸಲಾದ ಪ್ರಸ್ತಾವನೆಯು ಅಗತ್ಯ ದಾಖಲಾತಿಗಳೊಂದಿಗೆ ಹಾಗೂ ಈಗಾಗಲೇ ನೀಡಲಾಗಿರುವ ನಿರ್ದೇಶನಗಳನ್ವಯ ಇರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು.
- ಪ್ರಸ್ತಾವನೆಯನ್ನು ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ರವರಿಗೆ ಅನುಮೋದನೆಗಾಗಿ ಸಲ್ಲಿಸತಕ್ಕದ್ದು.
- ನಿರ್ದೇಶನಾಲಯದಿಂದ ಪ್ರಸ್ತಾವನೆಯನ್ನು ಪರಿಶೀಲಿಸಿ, ಮಂಜೂರಾತಿ ನೀಡಲಾದ ಕಾಮಗಾರಿಗಳನ್ನು ಯಾವ ನಿರ್ಮಾಣ ಏಜೆನ್ಸಿ ವತಿಯಿಂದ ಕೈಗೊಳ್ಳಬೇಕು ಎಂಬುದನ್ನು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳು ನಿರ್ಧರಿಸತಕ್ಕದ್ದು.
- ಕಾಮಗಾರಿಗಳ ಅಂದಾಜು ಪಟ್ಟಿಗಳನ್ನು ಸಿದ್ದಪಡಿಸಿ, ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರ ಮುಖಾಂತರ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿ delegation of financial powers ನಲ್ಲಿ ತಿಳಿಸಿರುವಂತೆ ಆಡಳಿತಾತ್ಮಕ ಅನುಮೋದನೆಯನ್ನು ಪಡೆಯತಕ್ಕದ್ದು.
- ನಿಗಧಿತ ಅವಧಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ ಸಂಬಂಧಪಟ್ಟ ನಿರ್ಮಾಣ ಏಜೆನ್ಸಿಯಿಂದ ದೃಢೀಕೃತ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.
- ಯೋಜನೆಗೆ ಸಂಬಂಧಿಸಿದ ಅನುದಾನ ಮತ್ತು ಕಾಮಗಾರಿಯ ವಿವರವನ್ನು ಅನುಷ್ಠಾನ ಏಜೆನ್ಸಿ ಫಲಕಗಳನ್ನು ಪ್ರದರ್ಶಿಸುವುದು.

(ಅಕ್ರಂ ಪಾಷ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ.